# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 187
Volume - 01 Issue - 187
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269
ಚಿತ್ರದುರ್ಗ
Chitradurga
ದಿನಾಂಕ: 09-02-2024 ಶುಕ್ರವಾರ
Date: 09-02-2024 Friday
ಪುಟ: 4
Page: 4
ಬೆಲೆ : ರೂ.2-00
Price: Rs. 2-00



ಒಳಪುಟದ ಸುದ್ದಿಗಳು
ಅನುದಾನ ಮೀಸಲಿರಿಸುವುದು ಕಡ್ಡಾಯ: ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ 2
ಮಾಜಿ ಶಾಸಕ ಮಂಡಿಮಠ ಆಶೀರ್ವಾದ ಪಡೆದ ರಘುಚಂದನ್ 3
ಸ್ವಚ್ಛ, ಸುಂದರ ಚಿತ್ರದುರ್ಗ ನಿರ್ಮಾಣಕ್ಕೆ ಪಣತೊಡಿ: ಎಡಿಸಿ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು, ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## 3 ತಿಂಗಳಲ್ಲಿ ಜನಸ್ಪಂದನ ಅರ್ಜಿಗಳಿಗೆ ಪರಿಹಾರ ಕೊಡಬೇಕು: ಅಧಿಕಾರಿಗಳಿಗೆ ಸಿಎಂ ಸೂಚನೆ

### ಕಾನೂನು ಪ್ರಕಾರ ಪರಿಹಾರ ಸಾಧ್ಯವಿಲ್ಲದಿದ್ದರೆ ಆ ರೀತಿ ಹಿಂಬರಹ ಕೊಡಬೇಕು. ಪ್ರತೀ ಅರ್ಜಿಗೂ ಸರ್ಕಾರ್ ಸ್ಪಂದನೆ ಇರಬೇಕು

# ಅಸಮಾನತೆ ನಿವಾರಣೆಗೆ ಗ್ಯಾರಂಟಿ

### ಮೊದಲ ಜನಸ್ಪಂದನದಲ್ಲಿ ಶೇ. 98 ರಷ್ಟು ಅರ್ಜಿ ವಿಲೇವಾರಿ; ಜಿಲ್ಲಾ ಸಚಿವರಿಂದ 108 ಜನಸ್ಪಂದನ ಕಾರ್ಯಕ್ರಮ

» ಬೆಂಗಳೂರು:

ನವೆಂಬರ್ 27 ರಂದು ನಡೆದ ಮೊದಲ ಜನಸ್ಪಂದನ ಕಾರ್ಯಕ್ರಮದಲ್ಲಿ ಸ್ವೀಕರಿಸಲಾದ ಅರ್ಜಿಗಳ ಪೈಕಿ ಶೇ. 98 ರಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಿ, ಜನರಿಗೆ ಪರಿಹಾರಗಳನ್ನು ಒದಗಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸದರು.

ಅವರು ಇಂದು ವಿಧಾನಸೌಧದ ಮುಂಭಾಗದಲ್ಲಿ ರಾಜ್ಯಮಟ್ಟದ ಎರಡನೇ ಜನಸ್ಪಂದನ ಕಾರ್ಯಕ್ರಮದಲ್ಲಿ ಮಾತನಾಡಿದರು. ಸರ್ಕಾರವನ್ನು ಜನರ ಬಳಿಗೇ ಒಯ್ಯಬೇಕೆಂಬುದು ಸರ್ಕಾರದ ಆಶಯ. ಈ ನಿಟ್ಟಿನಲ್ಲಿ ಎಲ್ಲ ಜಿಲ್ಲೆಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಈ ವರೆಗೆ ಒಟ್ಟು 108 ಜನಸ್ಪಂದನ ಕಾರ್ಯಕ್ರಮಗಳನ್ನು ನಡೆಸಿದ್ದಾರೆ ಎಂದು ವಿವರಿಸಿದರು. ತಾಲ್ಲೂಕು, ಜಿಲ್ಲಾ ಮಟ್ಟದಲ್ಲಿಯೂ ಜನಸ್ಪಂದನ ಕಾರ್ಯಕ್ರಮ ನಡೆಸಲಾಗುತ್ತಿದ್ದು, ಇಲ್ಲಿ ಬಗೆಹರಿಯದ ಸಮಸ್ಯೆಗಳನ್ನು ರಾಜ್ಯಮಟ್ಟದ ಜನಸ್ಪಂದನ ಕಾರ್ಯಕ್ರಮದಲ್ಲಿ ಜನರು ಸಲ್ಲಿಸಬಹುದಾಗಿದೆ. ಕಾನೂನುಬದ್ಧವಾದ ಸಮಸ್ಯೆಗಳಿಗೆ ನಮ್ಮ ಸರ್ಕಾರ ಪರಿಹಾರ ಒದಗಿಸಲಿದೆ ಎಂದು ಮುಖ್ಯಮಂತ್ರಿಗಳು ಸ್ಪಷ್ಟಪಡಿಸಿದರು.

ಸಮಸ್ಯೆ ಬಗೆಹರಿಸಲು ಕಾನೂನು ತೊಡಕು ಇದ್ದಲ್ಲಿ, ಈ ಕುರಿತು ಅರ್ಜಿದಾರರಿಗೆ ಕಾರಣ ಸಹಿತ ಹಿಂಬರಹ ನೀಡಲಾಗುವುದು ಎಂದು ತಿಳಿಸಿದರು.





ಜನಸ್ಪಂದನದಲ್ಲಿ ಸ್ವೀಕರಿಸಲಾದ ಅರ್ಜಿಗಳಿಗೆ ಮೂರು ತಿಂಗಳೊಳಗೆ ವಿಲೇವಾರಿ ಮಾಡಬೇಕು; ಜನರ ಸಮಸ್ಯೆಗಳಿಗೆ ಪರಿಹಾರ ಒದಗಿಸಬೇಕು ಎಂದು ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಆಡಳಿತ ವ್ಯವಸ್ಥೆ ಚುರುಕುಗೊಳ್ಳಬೇಕು; ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎನ್ನುವ ಆಶಯದೊಂದಿಗೆ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸರ್ಕಾರ ರೂಪಿಸುವ ಜನೋಪಯೋಗಿ ಕಾರ್ಯಕ್ರಮಗಳು ನೇರವಾಗಿ ಫಲಾನುಭವಿಗಳಿಗೆ ತಲುಪಬೇಕು. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದು ಎಂಟು ತಿಂಗಳೊಳಗಾಗಿ ಎಲ್ಲ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದೇವೆ. ಬಿಜೆಪಿಯವರು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲು ಸಾಧ್ಯವಿಲ್ಲ. ಕರ್ನಾಟಕ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂದು ಟೀಕಿಸಿದ್ದರು. ಯೋಜನೆ ಜಾರಿಗೊಳಿಸಿದಾಗ ವಿರೋಧ ಪಕ್ಷಗಳ ನಾಯಕರು ಈಗ ಯೋಜನೆ ಜಾರಿಗೊಳಿಸಿ ಆಮೇಲೆ ನಿಲ್ಲಿಸುತ್ತಾರೆ ಎಂದು ತಿಳಿಸಿದ್ದಾರೆ. ಆದರೆ ಇಂತಹ ಅಪಪ್ರಚಾರಗಳಿಗೆ ಕಿವಿಗೊಡಬಾರದು ಎಂದು ತಿಳಿಸಿದರು.

ಪುಟ 2

## ಅಪ್ರಾಪ್ತಬಾಲಕಿ ಬಲತ್ಕಾರ, ಗರ್ಭಿಣಿ ಪ್ರಕರಣ : ಆರೋಪಿಗೆ 10 ವರ್ಷ ಜೈಲು

» ಚಳ್ಳಕೆರೆ

ಅಪ್ರಾಪ್ತ ಬಾಲಕಿಯನ್ನು ಮದುವೆಯಾಗುವುದಾಗಿ ಆಮಿಷವೊಡ್ಡಿ ಬಲವಂತದಿಂದ ಆಕೆಯನ್ನು ಬಲತ್ಕರಿಸಿ ಗರ್ಭಿಣಿಯಾಗುವಂತೆ ಮಾಡಿದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಚಿತ್ರದುರ್ಗದ ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾದೀಶೆ ಬಿ.ಕೆ. ಕೋಮಲ ಆರೋಪ ರುಜುವಾತಾದ ಹಿನ್ನೆಲೆಯಲ್ಲಿ ಆರೋಪಿ ಮಲ್ಲಿಕಾರ್ಜುನನಿಗೆ 10 ವರ್ಷ ಕಠಿಣ ಸಜೆ, 50 ಸಾವಿರ ದಂಡ, ದಂಡಕಟ್ಟಲು ವಿಫಲವಾದರೆ 6ತಿಂಗಳು ಕಠಿಣ ಸಜೆ ಶಿಕ್ಷೆ ವಿಧಿಸಿ ಆದೇಶಿಸಿದ್ದಾರೆ.

ಪ್ರಕರಣ ಹಿನ್ನೆಲೆ :- ಚಳ್ಳಕೆರೆ ರಹೀಂನಗರದ ಬಯಲುಪ್ರದೇಶದಲ್ಲಿ ಕಾರ್ತಿಕೇಯನಹಟ್ಟಿ ಗ್ರಾಮದ ಮಲ್ಲಿ ಯಾನೆ ಮಲ್ಲಿಕಾರ್ಜುನ ಎಂಬ ಯುವಕ ರಹೀಂನಗರದ 16 ವರ್ಷದ ಬಾಲಕಿಯನ್ನು ಪುಸಲಾಯಿಸಿ ಕರೆದೊಯ್ದು ನಿರಂತರ ಅತ್ಯಾಚಾರ ನಡೆಸಿದ ಹಿನ್ನೆಲೆಯಲ್ಲಿ ಆತನನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಲಾಗಿತ್ತು.

ಪುಟ 2

## ಕುಷ್ಠರೋಗ ಜಾಗೃತಿ ಅಭಿಯಾನಕ್ಕೆ ಚಾಲನೆ

» ಚಿತ್ರದುರ್ಗ

ಚಳ್ಳಕೆರೆ ನಗರದಲ್ಲಿ ಬುಧವಾರ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿ ಡಾ. ಜಿ.ಓ. ನಾಗರಾಜ್ ಚಾಲನೆ ನೀಡಿದರು. ನಂತರ ಚಳ್ಳಕೆರೆ ನಗರದ ಬಿಸಿ ನೀರು ಮುದ್ದಪ್ಪ ಪ್ರೌಢಶಾಲೆಯಲ್ಲಿ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನದ ಪೋಸ್ಟರ್‌ಗಳನ್ನೂ ಬಿಡುಗಡೆ ಮಾಡಲಾಯಿತು. ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಬಿ.ತಿಪ್ಪೇಸ್ವಾಮಿ, ಡಿ.ಎನ್.ಟಿ ತಂಡದ ಮೇಲ್ವಿಚಾರಕರಾದ ಎಂ.ಚಂದ್ರಪ್ಪ, ಟಿ.ಮಂಜುನಾಥ್, ಇಸಿಓಗಳಾದ ಗಿರೀಶ್, ವೀರಸ್ವಾಮಿ, ಮುಖ್ಯ ಶಿಕ್ಷಕ ಮಂಜುನಾಥರೆಡ್ಡಿ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಅಮೃತರಾಜ್, ರಾಜು, ಸಂಜಯ್ ಕುಮಾರ್ ಹಾಜರಿದ್ದರು.



## ಫಾಸ್ಟ್ ನ್ಯೂಸ್

### 11ರಂದು ನಗರ ಠಾಣೆಯಲ್ಲಿ ದಲಿತ ಸಭೆ

» ಚಿತ್ರದುರ್ಗ

ಚಿತ್ರದುರ್ಗ ನಗರ ಪೊಲೀಸ್ ಠಾಣೆಯಲ್ಲಿ ಫೆ.11ರಂದು ಬೆಳಿಗ್ಗೆ 11.30ಕ್ಕೆ ದಲಿತ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ದಲಿತ ಮುಖಂಡರು ಮತ್ತು ಸಾರ್ವಜನಿಕರು ದಲಿತ ಸಭೆಗೆ ಹಾಜರಾಗಬೇಕು ಎಂದು ಚಿತ್ರದುರ್ಗ ನಗರ ಪೊಲೀಸ್ ಠಾಣೆ ಪೊಲೀಸ್ ಇನ್ಸ್‌ಪೆಕ್ಟರ್ ಕೋರಿದ್ದಾರೆ.

### 9ರಂದು ತರಬೇತಿ

■ ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಫೆ.9ರಂದು ಬೆಳಗ್ಗೆ 10.30ಕ್ಕೆ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಐಮಂಗಲ ಹೋಬಳಿ ಮತ್ತು ಕಸಬಾ, ಹಿರಿಯೂರಿನ ರೈತರಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೂಕ್ಷ್ಮ ಮತ್ತು ತುಂತುರ ನೀರಾವರಿ ಘಟಕಗಳ ಉಪಯೋಗ ಮತ್ತು ನಿರ್ವಹಣೆ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ವಿಜಯ್‌ಕುಮಾರ್, ಎಜಿಎಂ., ಪ್ರೀಮಿಯರ್ ಇರಿಗೇಷನ್ ಕಂ. ಲಿ., ಬೆಂಗಳೂರು ಇವರು ನೀರಿನ ಸಮರ್ಥ ಬಳಕೆ, ಹನಿ ನೀರಾವರಿ ಮತ್ತು ಸ್ಪ್ರಿಂಕ್ಲರ್ ಘಟಕಗಳ ಉಪಯೋಗ ಮತ್ತು ಅವುಗಳ ನಿರ್ವಹಣೆಯ ಕುರಿತು ವಿಷಯ ಮಂಡನೆ ಮತ್ತು ಪ್ರಾತ್ಯಕ್ಷಿಕೆ ನೀಡುವರು. ಹಿರಿಯೂರು ತಾಲ್ಲೂಕಿನ ಐಮಂಗಲ ಹೋಬಳಿ ಮತ್ತು ಕಸಬಾ ಹೋಬಳಿ ಹಿರಿಯೂರಿನ ಆಸಕ್ತ 60 ಜನ ರೈತಭಾಂದವರು ಈ ತರಬೇತಿಯಲ್ಲಿ ಭಾಗವಹಿಸಲು ರಜನೀಕಾಂತ. ಆರ್ ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿಕೇಂದ್ರ, ಬಬ್ಬೂರು ಫಾರಂ (8277931058), ಎಂ.ಉಷಾರಾಣಿ, ಸಹಾಯಕ ಕೃಷಿ ನಿರ್ದೇಶಕರು (ರೈ.ಮ) 9980730696, ಟಿ.ಪಿ.ರಂಜಿತಾ, ಕೃಷಿ ಅಧಿಕಾರಿ (8277930959), ಸಿಕಂದರ್ ಬಾಷಾ, ಕೃಷಿ ಅಧಿಕಾರಿ (8277931058) ಮತ್ತು ಪವಿತ್ರಾ ಎಂ. ಜೆ. (9535412286) ಅವರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದೆ. ಮೊದಲು ನೋಂದಾವಣಿ ಮಾಡಿಕೊಂಡ 60 ಜನ ರೈತ ಭಾಂದವರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕ ಆರ್.ರಜನೀಕಾಂತ ತಿಳಿಸಿದ್ದಾರೆ.

### ಶಶಿರಾಜ್‌ಗೆ ಪಿಎಚ್‌ಡಿ

» ಚಿತ್ರದುರ್ಗ



ನಗರದ ಜೆ.ಸಿ.ಆರ್ ಬಡವಣೆಯ ಕೆ.ನಾಗರಾಜ ಮತ್ತು ದಿ.ಬಿ.ಕಾಂತಮ್ಮ ಇವರ ಹಿರಿಯ ಪುತ್ರ ಕೆ.ಎನ್.ಶಶಿರಾಜ್ ವ ಂ ಡಿಸಿದ ಮಹಾಪ್ರಬಂಧಕ್ಕೆ ಧಾರವಾಡದ ಕರ್ನಾಟಕ ವಿಶ್ವವಿದ್ಯಾನಿಲಯವು ಡಾಕ್ಟರೇಟ್ (ಪಿಎಚ್‌ಡಿ) ಪದವಿ ನೀಡಿದೆ. ಇವರು ಧಾರವಾಡ ಜಿಲ್ಲೆಯ ಕರ್ನಾಟಕ ವಿಶ್ವವಿದ್ಯಾನಿಲಯದ ಸಸ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಹಾಗೂ ಮಾರ್ಗದರ್ಶಕ ಡಾ.ಶ್ರೀನಿವಾಸ ನಾಯಕ ರವರ ಮಾರ್ಗದರ್ಶನದಲ್ಲಿ "ಬಯೋಫ್ಯಾಬ್ರಿಕೇಶನ್ ಆಫ್ ಸಿಲ್ವರ್ ನಾನೋಪಾರ್ಟಿಕಲ್ಸ್ ಯುಸಿಂಗ್ ಫ್ಲವರ್ ಬಡ್ಸ್ ಎಕ್ಸ್‌ಟ್ರಾಕ್ಟ್ ಆಫ್ ಸೆಲೆಕ್ಟೆಡ್ ಮೆಂಬರ್ಸ್ ಆಫ್ ಲ್ಯಾವಿಯೆಸಿ ಆ್ಯಂಡ್ ಇವ್ಯಾಲ್ಯುಯೇಶನ್ ಆಫ್ ದೇರ್ ಮೈಕ್ರೊಟಾಕ್ಸಿಕ್ ಪೊಟೆನ್ಸಿ ಆನ್ ಡಿಸೀಸಸ್ ಆಫ್ ಸೊರ್ಘಮ್" ಎಂಬ ವಿಷಯದ ಕುರಿತು ಮಹಾಪ್ರಬಂಧ ಮಂಡಿಸಿದ್ದರು. ಇವರ ಸಂಶೋಧನ ಲೇಖನಗಳು ಅನೇಕ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ನಿಯತಕಾಲಿಕೆಗಳಲ್ಲಿ ಪ್ರಕಟಗೊಂಡಿರುತ್ತವೆ ಹಾಗೂ ಸಂಶೋಧನ ಪೂರಕವಾಗಿ ಹಲವಾರು ವಿಶ್ವವಿದ್ಯಾಲಯಗಳಲ್ಲಿ ನಡೆದ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಸಮ್ಮೇಳನಗಳಲ್ಲಿ ಭಾಗವಹಿಸಿ ಸಂಶೋಧನ ವಿಷಯಗಳನ್ನು ಮಂಡಿಸಿರುತ್ತಾರೆ.

## ಪ್ರಮುಖ ಸುದ್ದಿ

# 9,10 ರಂದು ರಜತ ಮಹೋತ್ಸವ; ಮುಖ್ಯಮಂತ್ರಿ ಭಾಗಿ

» ಚಿತ್ರದುರ್ಗ

ಹೊಸದುರ್ಗ ತಾಲೂಕಿನ ಬ್ರಹ್ಮವಿದ್ಯಾನಗರದ ಭಗೀರಥ ಗುರುಪೀಠದಲ್ಲಿ ಫೆ.9,10 ರಂದು ಶ್ರೀಪುರುಷೋತ್ತಮಾನಂದ ಶ್ರೀಗಳ ಪಟ್ಟಾಭಿಷೇಕದ 25ನೇ ವರ್ಷದ ರಜತ ಮಹೋತ್ಸವ, ರಾಷ್ಟ್ರೀಯ ಭಗೀರಥ ಜಯಂತ್ಯುತ್ಸವ ಹಾಗೂ ಉಪ್ಪಾರ ಬೃಹತ್ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಭಗೀರಥ ಜಿಲ್ಲಾ ಉಪ್ಪಾರ ಸಮಾಜದ ಗೌರವ ಅಧ್ಯಕ್ಷರಾದ ಎಸ್.ನಾಗರಾಜ್ ತಿಳಿಸಿದ್ದಾರೆ.

ಸಮಾವೇಶದ ಬಗ್ಗೆ ಮಾಹಿತಿಯನ್ನು ನೀಡಿರುವ ಅವರು, ಲೇಪಾಕ್ಷಿ ಸ್ವಾಮೀಜಿ ನಿಧನ ನಂತರ ಫೆ.10, 2000ರಂದು ಮಠದ 13ನೇ ಪೀಠಾಧ್ಯಕ್ಷರಾದ ಶ್ರೀಪುರುಷೋತ್ತಮಾನಂದಪುರಿ ಸ್ವಾಮೀಜಿ, ಪ್ರಸ್ತುತ 25ನೇ ವರ್ಷದ ಪಟ್ಟಾಭಿಷೇಕದ ರಜತ ಮಹೋತ್ಸವದಲ್ಲಿದ್ದಾರೆ ಲೇಪಾಕ್ಷಿ ಸ್ವಾಮೀಜಿ ಅವರು, ಗ್ರಾಮೀಣ ಭಾಗದ ಬಡಜನತೆಗೆ ಉಚಿತ ವಿದ್ಯಾಭ್ಯಾಸ ನೀಡುವ ಉದ್ದೇಶದಿಂದ 1973-74ರಲ್ಲಿ ಶಿಕ್ಷಣ ಸಂಸ್ಥೆ ಸ್ಥಾಪಿಸಿದರುಶ್ರೀಗಳು ಬ್ರಹ್ಮವಿದ್ಯಾನಗರದಲ್ಲಿ ಕೆರೆ ಕಟ್ಟಿಸಿ ನೀರಿನ ಬವಣೆ ನೀಗಿಸಿದ ಆಧುನಿಕ ಭಗೀರಥ ಉಪ್ಪಾರ ಜನಾಂಗದವರು ಮೈಸೂರು, ಚಾಮರಾಜನಗರ, ಚಿತ್ರದುರ್ಗ, ಚಿಕ್ಕಮಗಳೂರು, ದಾವಣಗೆರೆ, ಬೆಳಗಾವಿ ಜಿಲ್ಲೆಯಲ್ಲಿ ಸಾಕಷ್ಟು ಸಂಖ್ಯೆಯಲ್ಲಿದ್ದಾರೆ. ಉಪ್ಪಾರರು ಒಂದು ವೃತ್ತಿಗೆ ಸೀಮಿತರಾಗಿಲ್ಲ. ಕಲ್ಲು ಬಂಡೆ ಹೊಡೆಯುವ, ದೇವಸ್ಥಾನದ ಕಲ್ಲುಗಳನ್ನು ನಿರ್ಮಾಣ ಮಾಡುವ ಕೆಲಸ ಮಾಡುತ್ತಿದ್ದಾರೆ.

ಹೊಸದುರ್ಗ ಭಗೀರಥ ಮಠದಲ್ಲಿ ಶ್ರೀಗಳ 25ನೇ ವರ್ಷದ ರಜತ ಮಹೋತ್ಸವವನ್ನು ಅದ್ದೂರಿಯಾಗಿ ನಡೆಸಲು ಭಕ್ತ ಸಮೂಹ ಸಕಲ ಸಿದ್ಧತೆಕೈಗೊಂಡಿದೆ. ಮಠಗಳೆಂದರೆ ಕೇವಲ ಆಧ್ಯಾತ್ಮ ಕೇಂದ್ರಗಳಲ್ಲ, ಅವು ಕಾಯಕ ಕೇಂದ್ರಗಳು ಕೂಡ ಹೌದು ಎಂಬುದನ್ನು ಭಗೀರಥ ಮಠದ ಶ್ರೀಗಳು ತೋರಿಸಿಕೊಟ್ಟಿದ್ದಾರೆ. ಕೇವಲ ಪೂಜೆ, ಪುನಸ್ಕಾರ, ಧಾರ್ಮಿಕ ಕಾರ್ಯಗಳಿಗೆ ಮಾತ್ರ ಸೀಮಿತರಾಗದೇ, ಉಪ್ಪಾರ ಸಮಾಜದ ರಾಜಕೀಯ, ಶೈಕ್ಷಣಿಕ, ಸಾಮಾಜಿಕ ಸಂಘಟನೆಯಲ್ಲಿಯೂ ನಿಪುಣರಾಗಿರುವ ಶ್ರೀಗಳು 25 ವರ್ಷಗಳ ಸುದೀರ್ಘ ಸನ್ಯಾಸಿ ಪಯಣದಲ್ಲಿ ಶಿಕ್ಷಣ ಸಂಸ್ಥೆಗಳ ಸ್ಥಾಪನೆ, ಮಠದ ಅಭಿವೃದ್ಧಿ, ಕೃಷಿ ಕಾಯಕ, ಕೆರೆ ಕಟ್ಟೆಗಳ ನಿರ್ಮಾಣದಂತ ಮಹತ್ತರ ಕಾರ್ಯ ಮಾಡಿದ್ದಾರೆ.

ಸಮಾಜಕ್ಕೆ ಮಾಡು, ಉಪ್ಪಿನ



ಸತ್ಯಾಗ್ರಹ ಸ್ವಾತಂತ್ರ್ಯದ ಕುರುಹುಗಳಿರುವ ಐತಿಹಾಸಿಕ ಹಿನ್ನೆಲೆಯಿದೆ. ಸ್ವಾತಂತ್ರ್ಯ ಪೂರ್ವದಿಂದಲೂ ಉಪ್ಪುತಯಾರಿಸಿ ಹಳ್ಳಿಗಳಲ್ಲಿ ಮಾರಾಟ ಮಾಡಿ ಜೀವನ ನಡೆಸುತ್ತಿದ್ದ ಉಪ್ಪಾರರು, ರಾಜರ ಕಾಲದಲ್ಲಿ ತೆರಿಗೆ ಕಟ್ಟುವಷ್ಟು ಆರ್ಥಿಕ ಶಕ್ತಿ ಹೊಂದಿದ್ದರು. ಭಾರತಕ್ಕೆ ಪ್ರವೇಶ ಪಡೆದ ಬ್ರಿಟಿಷರು ಉಪ್ಪಿನ ಮೇಲೆ ಹೆಚ್ಚಿನ ತೆರಿಗೆ ವಿಧಿಸಿದ್ದರಿಂದ ಇದನ್ನು ವಿರೋಧಿಸಿ ಮಹಾತ್ಮ ಗಾಂಧೀ ನೇತೃತ್ವದಲ್ಲಿ 1930ರಲ್ಲಿ ದಂಡಿ ಅಥವಾ ಉಪ್ಪಿನ ಸತ್ಯಾಗ್ರಹ ನಡೆಯಿತು. 200ಕ್ಕೂ ಅಧಿಕ ಉಪ್ಪಾರ ಸಮಾಜದವರು ಈ ಹೋರಾಟದಲ್ಲಿ ಸಾವನ್ನಪ್ಪಿದರು. ಈ ಚಳವಳಿಯೂ ಸ್ವಾತಂತ್ರ್ಯ ಭಾರತಕ್ಕೆ ಕಾರಣವಾಯಿತು

ಫೆ.9ರಬೆಳಗ್ಗೆ10ಕ್ಕೆಆಯೋಜಿಸಲಾಗಿರುವ ಸಮಾವೇಶ 'ವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸುವರು. ಡಿಸಿಎಂ ಡಿ.ಕೆ.ಶಿವಕುಮಾರ್ ಸ್ಮರಣ ಬಿಡುಗಡೆಗೊಳಿಸುವರು. ಶಾಸಕ ಪುಟ್ಟರಂಗಶೆಟ್ಟಿ ಅಧ್ಯಕ್ಷತೆ ವಹಿಸುವರು. ಸಚಿವ ಸತೀಶ್ ಜಾರಕಿಹೊಳಿ ಭಗೀರಥ ಪ್ರಶಸ್ತಿ ಪ್ರದಾನ ಮಾಡುವರು. ಸಚಿವ ಡಿ.ಸುಧಾಕರ್ ಕ್ಯಾಲೆಂಡರ್ ಬಿಡುಗಡೆ ಮಾಡುವರು. ಶಾಸಕ ಬಿ.ಜಿ.ಗೋವಿಂದಪ್ಪ ಶ್ರೀಭಗೀರಥ ಮಹರ್ಷಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವರು. ಸಚಿವರಾದ ಸತೀಶ್ ರಾಜಣ್ಣ, ಶಿವರಾಜ್ ತಂಗಡಗಿ, ಭೈರತಿ ಸುರೇಶ್, ಮಧು ಬಂಗಾರಪ್ಪ, ಆರ್.ಬಿ. ತಿಮ್ಮಾಪುರ, ಎನ್.ಎಸ್. ಬೋಸರಾಜು, ನಾಗೇಂದ್ರ ಸೇರಿದಂತೆ ವಿವಿಧ ಮಠಾಧೀಶರ ಸಮ್ಮುಖದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.

ಮಧ್ಯಾಹ್ನ2ಗಂಟೆಯಕಾರ್ಯಕ್ರಮವನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯಂದ್ರ ಉದ್ಘಾಟಿಸುವರು. ಬಿಹಾರದ ಮಾಜಿ ಉಪ ಮುಖ್ಯಮಂತ್ರಿ ರೇಣುದೇವಿ, ಕೇಂದ್ರದ ಗ್ರಾಮೀಣ ಮತ್ತು ಪಂಚಾಯತ್ ರಾಜ್ ಸಚಿವ ಕಪಿಲ್ ಮೋರೇಶ್ವರ ಪಾಟೀಲ್, ಫೆ.10ರ ಶನಿವಾರದಂದು ಆರೋಗ್ಯ ಶಿಬಿರ, ಭಕ್ತರಿಂದ ಶ್ರೀಗಳಿಗೆ ಸನ್ಮಾನ, ಧಾರ್ಮಿಕ ಕಾರ್ಯಕ್ರಮ ನಡೆಯಲಿವೆ.

ಸಾಲು ಮರದ ತಿಮ್ಮಕ್ಕ, ಬೆಂಗಳೂರು ರಾಜೀವ್ ಗಾಂಧಿ ಆರೋಗ್ಯ ವಿವಿ ಮಾಜಿ ಕುಲಪತಿ ಡಾ.ಕೆ.ಎಸ್. ರವೀಂದ್ರನಾಥ್, ಬೆಂಗಳೂರು ಉದ್ಯಮಿ ಕುಂಸಿ ಚಂದ್ರಪ್ಪ, ನಿವೃತ್ತ ಅಧಿಕಾರಿ ವಿಜಯ್ ಕುಮಾರ್ ತೋರಲ್, ಚಲನಚಿತ್ರ ನಿರ್ದೇಶಕ ಎಸ್.ವಿ. ರಾಜೇಂದ್ರಸಿಂಗ್ ಬಾಬು, ವಿಶ್ವದಾಖಲೆ ಸೈಕ್ಲಿಂಗ್ ಕ್ರೀಡಾಪಟು ಸವಿತ ಮಹತೋ ಅವರಿಗೆ ಮಠದಿಂದ ಕೊಡಮಾಡುವ ಭಗೀರಥ ರತ್ನ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುತ್ತದೆ.

ಶ್ರೀಮಠದ ಆವರಣದಲ್ಲಿ ಹೋಮ, ಹವನ, ಪೀಠಾರೋಹಣ ಸೇರಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಆರೋಗ್ಯ ಉಚಿತ ತಪಾಸಣಾ ಶಿಬಿರ, ನಿತ್ಯ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು, ಸರ್ಕಾರದ ವಿವಿಧ ಯೋಜನೆಗಳ ಮಾಹಿತಿ ಕುರಿತ ಪ್ರದರ್ಶನ ಹಾಗೂ ಫೆ. 8ರಿಂದ 10ರವರೆಗೆ ನಿರಂತರ ದಾಸೋಹ ನಡೆಯಲಿದೆ.

ಈ ಸಂದರ್ಭದಲ್ಲಿ ಶ್ರೀ ಭಗಿರಥ ಜಿಲ್ಲಾ ಉಪ್ಪಾರ ಸಮಾಜದ ಅಧ್ಯಕ್ಷರಾದ ಎನ್.ವಿರೇಶ್, ಕಾರ್ಯದರ್ಶಿ ಎಲ್. ಮಹೇಶ್, ಉಪಾಧ್ಯಕ್ಷರಾದ ಹೆಚ್.ತಿಮ್ಮಣ್ಣ, ಖಂಜಾಚಿ ಅಜ್ಜಪ್ಪ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ವನ್ಯಜೀವಿ ಅಂಗಾಂಗಗಳ ಪದಾರ್ಥ, ಟ್ರೋಫಿ ಒಪ್ಪಿಸಲು ಅವಕಾಶ

» ದಾವಣಗೆರೆ

ಸಾರ್ವಜನಿಕರು ತಮ್ಮಲ್ಲಿರುವ ಅಘೋಷಿತ ವನ್ಯಜೀವಿ, ಪ್ರಾಣಿಗಳ ಅಂಗಾಂಗಗಳ ಪದಾರ್ಥಗಳು, ಟ್ರೋಪಿಗಳು ಮತ್ತು ಸಂಸ್ಕರಿಸಿದ ಟ್ರೋಪಿಗಳನ್ನು ಅಧ್ಯರ್ಪಿಸಲು ಸಂಬಂಧಪಟ್ಟ ಅರಣ್ಯ ಇಲಾಖೆ, ಎಸಿಎಫ್, ಡಿಸಿಎಫ್ ಕಚೇರಿಗೆ ನೀಡಲು 90 ದಿನಗಳ ಕಾಲಾವಕಾಶ ನೀಡಲಾಗಿದೆ, ಅಧ್ಯರ್ಪಿಸಲು ಏ.11ರಂದು ಕೊನೆಯ ದಿನವಾಗಿದ್ದು, ದಾವಣಗೆರೆ ಜಿಲ್ಲೆಯ ಸಾರ್ವಜನಿಕರು ತಮ್ಮಲ್ಲಿರುವ ವನ್ಯಜೀವಿ ಅಂಗಾಗಳಾದ ಹುಲಿ ಉಗುರು, ಚಿರತೆ ಉಗುರು, ಆನೆದಂತ, ಜಿಂಕೆ ಕೊಂಬು, ವನ್ಯಪ್ರಾಣಿಗಳ ಚರ್ಮ, ವನ್ಯಜೀವಿ ವಸ್ತುಗಳು ಸೇರಿದಂತೆ ಇನ್ನಿತರೆ ವಸ್ತುಗಳನ್ನು ಹೊಂದಿದ್ದರೆ. ಅಧ್ಯರ್ಪಿಸಬೇಕು. ಹೆಚ್ಚಿನ ಮಾಹಿತಿಗಾಗಿ ದಾವಣಗೆರೆ ಪ್ರಾದೇಶಿಕ ವಲಯ ಕಚೇರಿ, ಮೊ.ನಂ:9481991703, ಜಗಳೂರು ಪ್ರಾದೇಶಿಕ ವಲಯ ಕಚೇರಿ, ಮೊ.9481991705, ಹೊನ್ನಾಳಿ ಪ್ರಾದೇಶಿಕ ವಲಯ ಕಚೇರಿ, ಮೊ.9481991704, ಹೊಸಕೆರೆ ರಂಗಯ್ಯನದುರ್ಗ ವನ್ಯಜೀವಿ ವಲಯ, ಮೊ. 9481991706, ಮತ್ತು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ದಾವಣಗೆರೆ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ ದಾವಣಗೆರೆ ಇವರನ್ನು ಸಂಪರ್ಕಿಸಿ

### ಮಹಿಳಾ ಸಬಲೀಕರಣ ಘಟಕದ ಹುದ್ದೆಗಳಿಗೆ ಅರ್ಜಿ

» ದಾವಣಗೆರೆ

ಕೇಂದ್ರ ಪುರಸ್ಕೃತ ಮಿಷನ್ ಶಕ್ತಿ ಯೋಜನೆಯಡಿ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಹುದ್ದೆಗಳಿಗೆ ತಾತ್ಕಾಲಿಕ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲಾ ಮಿಷನ್ ಸಂಯೋಜಕರ ಒಂದು ಹುದ್ದೆಗೆ ಸಮಾಜ ವಿಜ್ಞಾನ, ಜೀವ ವಿಜ್ಞಾನ, ಪೌಷ್ಠಿಕತೆ, ಔಷಧ, ಆರೋಗ್ಯ ನಿರ್ವಹಣೆ, ಸಮಾಜ ಕಾರ್ಯ, ಗ್ರಾಮೀಣ ನಿರ್ವಹಣೆಯಲ್ಲಿ ಪದವಿ ಪಡೆದಿದ್ದು. ಸಂಬಂಧಿತ ಕ್ಷೇತ್ರದಲ್ಲಿ ಸರ್ಕಾರೇತರ ಸಂಸ್ಥೆಗಳಲ್ಲಿ 3 ವರ್ಷ ಅನುಭವ ಹೊಂದಿರಬೇಕು. ಹಣಕಾಸು ಸಾಕ್ಷರತೆ ಮತ್ತು ಅಕೌಂಟೆಂಟ್ ತಜ್ಞರ ಒಂದು ಹುದ್ದೆಗೆ ಅರ್ಥಶಾಸ್ತ್ರ, ಬ್ಯಾಂಕಿಂಗ್, ಇತರೆ ವಿಭಾಗದಲ್ಲಿ ಪದವಿ ಪಡೆದಿದ್ದು. ಸರ್ಕಾರೇತರ ಸಂಸ್ಥೆಗಳೊಂದಿಗೆ 3 ವರ್ಷ ಅನುಭವ ಹೊಂದಿರಬೇಕು. ಅರ್ಹರು ಕಚೇರಿಯಿಂದ ಅರ್ಜಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕುವೆಂಪು ನಗರ, 14 ನೇ ಮುಖ್ಯ ರಸ್ತೆ, ಎಂ.ಸಿ.ಸಿ 'ಬಿ' ಬ್ಲಾಕ್, ದಾವಣಗೆರೆ. ಇಲ್ಲಿಗೆ ಖುದ್ದು ಅಥವಾ ಅಂಚೆ ಮೂಲಕ ಫೆ. 22 ರೊಳಗಾಗಿ ಸಲ್ಲಿಸಲು ಉಪನಿರ್ದೇಶಕರಾದ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ.

### ಅಭ್ಯರ್ಥಿಗಳಿಂದ ಅರ್ಜಿ

» ದಾವಣಗೆರೆ

ದಾವಣಗೆರೆ ವಿಶ್ವವಿದ್ಯಾನಿಲಯದಲ್ಲಿ ಪ್ರಸಕ್ತ ಸಾಲಿನ ಪಿಹೆಚ್‌ಡಿ ಸಂಶೋಧನಾ ಸ್ಥಾನಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಮಾರ್ಚ್ 10 ರೊಳಗಾಗಿ ವಿಭಾಗವಾರು ಖಾಲಿ ಸ್ಥಾನಗಳ ವಿವರಗಳಿಗಾಗಿ ಹಾಗೂ ಸಂಶೋಧನಾ ಸ್ಥಾನಗಳ ವಿವರಗಳಿಗಾಗಿ ವೆಬ್‌ಸೈಟ್ www.davangereuniversity.ac.in ಮೂಲಕ ಅರ್ಜಿ ಸಲ್ಲಿಸಬಹುದು.

### ಅಸಮಾನತೆ ನಿವಾರಣೆಗೆ ಗ್ಯಾರಂಟಿ: ಸಿಎಂ

» ಮೊದಲ ಪುಟದಿಂದ

ಅಸಮಾನತೆ ನಿವಾರಿಸುವ ಕಾರ್ಯಕ್ರಮ. ನಾವು ಸಂವಿಧಾನದಲ್ಲಿ, ಬಸವಾದಿ ಶರಣರಲ್ಲಿ ನಂಬಿಕೆ ಇಟ್ಟುಕೊಂಡಿರುವವರು. ಸಮಾಜದಲ್ಲಿ ಭ್ರಾತೃತ್ವ ಬೆಳೆಯಬೇಕು. ಸಮಾನತೆ ಮೂಡಬೇಕು. ಆಗ ಮಾತ್ರ ಸಮಾಜದಲ್ಲಿ ಶಾಂತಿ, ನೆಮ್ಮದಿ ಕಾಪಾಡಲು ಸಾಧ್ಯ ಎಂದು ಮುಖ್ಯಮಂತ್ರಿಗಳು ತಿಳಿಸಿದರು.ರಾಜ್ಯದ ನಾಯಕರು ಈಗ ಕೊಟ್ಟು ಆಮೇಲೆ ನಿಲ್ಲಿಸುತ್ತಾರೆ ಎಂದಿದ್ದಾರೆ. ಇದು ಬಡವರ ಕಾರ್ಯಕ್ರಮ. ಜೊತೆಗೆ ಅಸಮಾನತೆ ಹೋಗಲಾಡಿಸಲು ಮಾಡಿದ ಕಾರ್ಯಕ್ರಮಗಳು. ನಾವು ಸಂವಿಧಾನ, ಬಸವಾದಿ ಶರಣರಲ್ಲಿ ನಂಬಿಕೆ ಇಟ್ಟುಕೊಂಡಿರವವರು.ಭ್ರಾತೃವ ಬೆಳೆಯಬೇಕು, ಸಮಾನತೆ ಬೆಳೆಯಬೇಕು. ಆಗ ಮಾತ್ರ ಸಮಾಜದಲ್ಲಿ ಶಾಂತಿ ನೆಮ್ಮದಿ ಕಾಪಾಡಲು ಸಾಧ್ಯ. ರಾಜ್ಯದಲಿ ಕಾನೂನು ಸುವ್ಯವಸ್ಥೆ ಇದ್ದರೆ ಬಂಡವಾಳ ಹೂಡಿಕೆ ಸಾಧ್ಯವಾಗುತ್ತದೆ. ರಾಜ್ಯದಲ್ಲಿ ಸಾಮಾಜಿಕ ಆರ್ಥಿಕ ಬದಲಾವಣೆ ತರಲು ಜನಸ್ಪಂದನ ಅಗತ್ಯ ಎಂದು ನುಡಿದರು.

### ಅಪ್ರಾಪ್ತ ಗರ್ಭಿಣಿ ಪ್ರಕರಣ: ಆರೋಪಿಗೆ 10 ವರ್ಷ ಜೈಲು

» ಮೊದಲ ಪುಟದಿಂದ

ಅಪ್ರಾಪ್ತ ಬಾಲಕಿಯನ್ನು ಚಿತ್ರದುರ್ಗದಲ್ಲಿ ಕರೆದುಕೊಂಡು ಹೋಗಿ ಅಲ್ಲೇ ಬಿಟ್ಟುಬಂದಿದ್ದು, ಅಲ್ಲಿನ ಪೊಲೀಸರು ಚಿತ್ರದುರ್ಗದ ಬಾಲಕಿಯರ ಬಾಲಮಂದಿರಕ್ಕೆ ದಾಖಲಿಸಿ ಚಳ್ಳಕೆರೆ ಸಿಡಿಪಿಒ ಮತ್ತು ಪೋಷಕರಿಗೆ ಮಾಹಿತಿ ನೀಡಿದ್ದರು. ಬಾಲಕಿಯ ತಾಯಿ ನೀಡಿದ ದೂರಿನ ಅನ್ವಯ ಪ್ರಕರಣ ದಾಖಲಿಸಿದ್ದು ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ದೇಸಾಯಿ ಪ್ರಕರಣ ತನಿಖೆ ನಡೆಸಿದ್ದರು.

# ಅನುದಾನ ಮೀಸಲಿರಿಸುವುದು ಕಡ್ಡಾಯ; ಡಿಸಿ

» ದಾವಣಗೆರೆ

ಸಮಾಜದಲ್ಲಿ ರೀತಿಯ ವಿಕಲಚೇತನರನ್ನು ನಾವು ಕಾಣುತ್ತೇವೆ, ಎಲ್ಲರಂತೆ ಸಮಾನರಾಗಿ ಇವರು ಸಹ ಮುಖ್ಯವಾಹಿನಿಯುಲ್ಲಿರಬೇಕೆಂದು ಸರ್ಕಾರವು ಶೇ.5 ರಷ್ಟು ಅನುದಾನವನ್ನು ಮೀಸಲಿರಿಸಲು ಆದೇಶಿಸಿದ್ದು ಎಲ್ಲಾ ಇಲಾಖೆಗಳು ಇವರ ಅಭಿವೃದ್ಧಿಗಾಗಿ ಅನುದಾನ ಮೀಸಲಿರಿಸುವುದು ಕಡ್ಡಾಯವೆಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ ತಿಳಿಸಿದರು.



ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾಡಳಿತ ಮಹಾನಗರ ಪಾಲಿಕೆ ಜಿಲ್ಲಾ ಪಂಚಾಯತ್ ಮತ್ತು ಸ್ಪೂರ್ತಿ ಸಂಸ್ಥೆ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಒಂದು ದಿನದ ಕಾರ್ಯಗಾರ ಉದ್ಘಾಟಿಸಿ ಮಾತಾನಾಡಿ ಅವರು ಮಾತನಾಡಿದರು. ಎಲ್ಲಾ ಜಿಲ್ಲಾ ಮಟ್ಟದ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಇದು ಒಂದು ಉತ್ತಮವಾದ ಕಾರ್ಯಕ್ರಮವಾಗಿದೆ. ವಿಕಲಚೇತನರಗಿರುವಂತಹ ವ್ಯಕ್ತಿಗಳಿಗೆ ಒಂದು ಪರಿಪೂರ್ಣವಾದ ಮತ್ತು ಉತ್ತಮವಾದ ಬದುಕನ್ನು ಕಟ್ಟಿಕೊಡಬೇಕು. ಸರ್ಕಾರದ ಯೋಜನೆಗಳ ಮೂಲಕ ಇಲಾಖೆಗಳ ವತಿಯಿಂದ ಏನೆಲ್ಲ ಮಾಡಬಹುದು ಎಂಬುದರ ಬಗ್ಗೆ ಒಂದು ದಿನ ಚಿಂತನ, ಮಂತನ ನಡೆಸಿ ವಿಕಲಚೇತನರಿಗೆ ಅವಶ್ಯಕತೆಗನುಗುಣವಾಗಿ ಕಾರ್ಯಕ್ರಮಗಳನ್ನು ರೂಪಿಸುವುದಕ್ಕೆ ಕಾರ್ಯಗಾರ ಉತ್ತಮ ವೇದಿಕೆಯಾಗಲಿದೆ ಎಂದರು.ಸಮಾಜದಲ್ಲಿ 21 ಕ್ಕೂ ಹೆಚ್ಚು ವಿವಿಧ ರೀತಿಯ ದಿವ್ಯಾಂಗಜನರನ್ನು ಕಾಣುತ್ತೇವೆ, ಈ ಎಲ್ಲ ವಿಶೇಷಚೇತನರ ಧ್ವನಿಗೆ ಬೆಲೆ ಕೊಡಿಸುವಂತಹ ವಾತಾವರಣವನ್ನು ನಮ್ಮ ಸಮಾಜದಲ್ಲಿ ನಿರ್ಮಾಣ ಮಾಡಬೇಕಾಗಿದೆ. ಅವರಿಗೆ ಧ್ವನಿಯನ್ನು ಕೊಡಲು ಸರ್ಕಾರದ ಅನುದಾನದಲ್ಲಿ ಇವರ ಅಭಿವೃದ್ಧಿಗಾಗಿ ಯೋಜನೆಗಳನ್ನು ರೂಪಿಸುವ ಮೂಲಕ ಅನುಷ್ಠಾನ ಮಾಡಬೇಕಾಗಿದೆ. ಈ ಜನರ ಅಂಗವಿಕಲತೆಯನ್ನು ಸರಿಪಡಿಸಲು ಸಾಧ್ಯವಾಗದಿರಬಹುದು, ಆದರೆ ಇವರ ಜೀವನವನ್ನು ಉತ್ತಮಗೊಳಿಸಲು ನಾವು ಪ್ರಯತ್ನ ಮಾಡಬೇಕು. ಈ ನಿಟ್ಟಿನಲ್ಲಿ ಎಲ್ಲಾ ಇಲಾಖೆಗಳು ತಮ್ಮ ಅನುದಾನದಲ್ಲಿ ಶೇ 5 ರಷ್ಟು ಅನುದಾನ ಮೀಸಲಿರಿಸಬೇಕೆಂದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ. ಕರೆಣ್ಣವರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತಾನಾಡಿ. ವಿಶೇಷಚೇತನರ ಹಕ್ಕುಗಳ ಅಧಿನಿಯಮ 2016 ರಲ್ಲಿ ಆದೇಶಿಸಿರುವಂತೆ ವಿಶೇಷಚೇತನ ವ್ಯಕ್ತಿಗಳಿಗೆ ಅವಶ್ಯವಿರುವ ಎಲ್ಲಾ. ಸೇವೆಗಳನ್ನು ಒದಗಿಸುವ ಮೂಲಕ ಅವರು ಇತರರಂತೆ ಸ್ವಾವಲಂಭಿಗಳಾಗಿ ಘನತೆಯಿಂದ ಬದುಕಲು ಬೇಕಾದ ಪೂರಕ ವಾತಾವರಣ ಕಲ್ಪಿಸಲು ರಾಜ್ಯ ಸರ್ಕಾರವು ಬದ್ಧವಾಗಿರುತ್ತದೆ. ವಿಶೇಷಚೇತನರ ಹಕ್ಕುಗಳ ಅಧಿನಿಯಮ 2016 ರ ಕಲಂ 2 ರ ಷೆಡ್ಯೂಲ್-1 ರಲ್ಲಿ ದೈಹಿಕ ವಿಕಲತೆ, ಬೌದ್ಧಿಕ ವಿಕಲತೆ, ಮಾನಸಿಕ ವರ್ತನೆಗಳು, ದೀರ್ಘಕಾಲಿಕ ನರವೈಜ್ಞಾನಿಕ ಸ್ಥಿತಿಯಿಂದ ಉಂಟಾದ ಅಂಗವೈಕಲ್ಯ, ಬಹುವಿಧ ವಿಕಲತೆ ಅಡಿಯಲ್ಲಿ ಒಟ್ಟು 21 ವಿಶೇಷಚೇತನ ವಿಧಗಳನ್ನು ಪಟ್ಟಿ ಮಾಡಲಾಗಿದೆ ಎಂದರು.

ಕಾಯ್ದೆಯಡಿ ಕಲಂ 3 ರ ಪಟ್ಟಿಯ ಪೈಕಿ ಯಾವುದೇ ರೀತಿಯ ಅಂಗವೈಕಲ್ಯವಿರುವ ವಿಶೇಷಚೇತನ ವ್ಯಕ್ತಿ ಮತ್ತು, ವ್ಯಕ್ತಿಗಳು ಸಾರ್ವಜನಿಕ ಸ್ಥಳ ಅಥವಾ ಕಚೇರಿಗಳಲ್ಲಿ ವ್ಯವಹರಿಸಲು ವಿಶೇಷಚೇತನಸ್ನೇಹಿ ವಾತಾವರಣ ಮತ್ತು ವ್ಯವಸ್ಥೆಗಳನ್ನು ಹೊಂದುವುದು ಅವರ ಹಕ್ಕಾಗಿರುತ್ತದೆ. ಈ ನಿಟ್ಟಿನಲ್ಲಿ ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಮತ್ತು ಜಿಲ್ಲಾ ಪಂಚಾಯಿತಿಗಳು ವಿಶೇಷಚೇತನರ ಸ್ನೇಹಿ ಪಂಚಾಯತಿಗಳಾಗಿ ಕಾರ್ಯನಿರ್ವಹಿಸುವುದರ ಮೂಲಕ ವಿಶೇಷಚೇತನರ ಹಕ್ಕುಗಳ ರಕ್ಷಣೆ ಎಲ್ಲರ ಹೊಣೆಯಾಗಿರುತ್ತದೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ, ಸ್ಪೂರ್ತಿ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಕೆ.ಬಿ.ರೂಪ್ಲನಾಯ್ಕ ಪ್ರಾಸ್ತವಿಕವಾಗಿ ಮಾತನಾಡಿದರು.ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣಾಧಿಕಾರಿ ಡಾ.ಕೆ.ಪ್ರಕಾಶ, ಮಹಾನಗರ ಪಾಲಿಕೆಯ ಉಪನಿರ್ದೇಶಕಿ ನಳಿನಿ, ವಿ.ಹಿ.ನಾ.ಸ ಇಲಾಖೆಯ ರಾಜ್ಯ ಆಯುಕ್ತರಾದ ರಾಜಣ್ಣ, ರಾಷ್ಟ್ರೀಯ ದೃಷ್ಠಿ ದೋಷರ ಒಕ್ಕೂಟದ ರಾಜ್ಯ ಕಾರ್ಯದರ್ಶಿ ವೀರೇಶ್.ಎಂ ಉಪಸ್ಥಿತರಿದ್ದರು.

# ಲೋಕಸಭೆಗೆ ಸ್ಥಳೀಯರಿಗೆ ಟಿಕೆಟ್ ನೀಡಿ

» ಚಿತ್ರದುರ್ಗ

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಅಭ್ಯರ್ಥಿಯನ್ನಾಗಿ ಸ್ಥಳಿಯರನ್ನು ಆಯ್ಕೆ ಮಾಡಬೇಕು ಅದರಲ್ಲೂ ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿಯವರನ್ನು ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನಾಗಿ ಮಾಡುವಂತೆ ಕಾಂಗ್ರೆಸ್ ಪಕ್ಷದ ಮುಖಂಡರನ್ನು ಬಾಬು ಜಗಜೀವನರಾಂ ಕೈಗಾರಿಕಾ ನಿಗಮದ ಮಾಜಿ ಅಧ್ಯಕ್ಷರಾದ ಓ ಶಂಕರ್ ಒತ್ತಾಯಿಸಿದ್ದಾರೆ.



ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದವ ಅವರು, ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಕಾಂಗ್ರೆಸ್ ಪಕ್ಷದಿಂದ 24 ಜನ ಅಭ್ಯರ್ಥಿಗಳು ಅರ್ಜಿ ಹಾಕಿದ್ದಾರೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 18 ಲಕ್ಷ ಮತದಾರರಿದ್ದಾರೆ ಅದರಲ್ಲಿ ಪರಿಶಿಷ್ಟ ಜಾತಿಯವರು 8 ಲಕ್ಷ ಮತದಾರರಿದ್ದು ಅದರಲ್ಲಿ 4 ಲಕ್ಷ ಮಾದಿಗ ಸಮುದಾಯದ ಮತದಾರ ಇದ್ದಾರೆ ಇದನ್ನು ಪಕ್ಷದ ವರಿಷ್ಠರು ಗಮನಿಸಿದ್ದಾರೆ ಸ್ಥಳೀಯರಿಗೆ ಟಿಕೆಟ್ ನೀಡಬೇಕೆಂದು ವರಿಷ್ಠರ ಗಮನಕ್ಕೆ ಬಂದಿದೆ.. ಕೆಲವರು ಮಿಸ್ ಗೈಡ್ ಮಾಡಿ ನನಗೆ ಟಿಕೆಟ್ ಸಿಕ್ಕಿದೆ ಅಂತ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ದೂರಿದರು.

ಬೇರೆ ಕಡೆಯಿಂದ ಬಂದು ಸ್ಪರ್ಧಿಸಿ ಗೆದ್ದು ಹೋಗುತ್ತಾರೆ ಯಾವುದೇ ಅಭಿವೃದ್ಧಿ ಮಾಡಿಲ್ಲ ಸ್ಥಳೀಯರಾದರೆ ಕ್ಷೇತ್ರದ ಅಭಿವೃದ್ಧಿಗೆ ಕೆಲಸ ಮಾಡುತ್ತಾರೆ. ಯಾವುದೇ ಕಾರಣಕ್ಕೂ ಹೊರಗಿನ ಜಿಲ್ಲೆಯವರೆಗೆ ಟಿಕೆಟ್ ನೀಡಬಾರದು ಸ್ಥಳೀಯರಿಗೆ ಟಿಕೆಟ್ ನೀಡಬೇಕೆಂದು ಆಗ್ರಹಿಸಿ ಸ್ಥಳೀಯ ಅಭ್ಯರ್ಥಿಯಾದ ಡಾ. ತಿಪ್ಪೇಸ್ವಾಮಿರವರಿಗೆ ಟಿಕೆಟ್ ನೀಡಿದರೆ 2 ಲಕ್ಷ ಮತಗಳಿಂದ ಗೆಲ್ಲಲಿದ್ದಾರೆ ಎಂದು ಭವಿಷ್ಯ ನುಡಿದರು.ನಗರಸಭೆ ಮಾಜಿ ಅದ್ಯಕ್ಷರಾದ ಸಿ.ಟಿ.ಕೃಷ್ಣಮೂರ್ತಿ ಮಾತನಾಡಿ, ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷ ಆದರೂ ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಮಾಜಿ ಮುಖ್ಯಮಂತ್ರಿಗಳಾದ ಎಸ್.ನಿಜಲಿಂಗಪ್ಪ ಹಾಗೂ ಜಗಳೂರಿನ ಇಮಾಮ್‌ಸಾಬ್ ರವರನ್ನು ಹೊರತುಪಡಿಸಿದರೆ ಬೇರೆ ಯಾರಿಗೂ ಸಹ ಸ್ಥಳೀಯರಿಗೆ ಕಾಂಗ್ರೆಸ್ ಪಕ್ಷ ಟಿಕೆಟ್ ನೀಡಿರುವುದಿಲ್ಲ. ಬೇರೆ ಕಡೆಯಿಂದ ಬಂದು ಇಲ್ಲಿ ಗೆದ್ದರೆ ನಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳು ವುದಕ್ಕೆ ಆಗಲ್ಲ.. ಆದ್ದರಿಂದ ಸ್ಥಳೀಯರಿಗೆ ಟಿಕೆಟ್ ಕೊಟ್ಟರೆ ನಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಬಹುದು ಎಂದರು.ನಗರಸಭೆಯ ಮತ್ತೋರ್ವ ಮಾಜಿ ಅಧ್ಯಕ್ಷರಾದ ಹೆಚ್.ಮಂಜಪ್ಪ ಮಾತನಾಡಿ, ಬೇರೆಯವರು ಬಂದು ಇಲ್ಲಿ ಗೆದ್ದು ಹೋಗುತ್ತಾರೆ ಇಲ್ಲಿಯ ಸಮಸ್ಯೆಗಳ ಅವರಿಗೆ ಅರಿವೇ ಇರುವುದಿಲ್ಲ. ಕಾಂಗ್ರೆಸ್ ಪಕ್ಷದ ಮುಖಂಡರಲ್ಲಿ ಕೇಳಿಕೊಳ್ಳುವುದೇನೆಂದರೆ ಕಾಂಗ್ರೆಸ್ ಪಕ್ಷದಿಂದ ಸ್ಥಳೀಯರಿಗೆ ಟಿಕೆಟ್ ನೀಡಬೇಕು... ಅದರಲ್ಲೂ ಸ್ಥಳೀಯ ಅಭ್ಯರ್ಥಿಯಾದ ಡಾ. ತಿಪ್ಪೇಸ್ವಾಮಿ @ ಜೆ.ಜೆ ಹಟ್ಟಿ ತಿಪ್ಪೇಸ್ವಾಮಿ ರವರಿಗೆ ಟಿಕೆಟ್ ನೀಡಬೇಕು ಎಂದು ಒತ್ತಾಯಿಸಿದರು.

ಗೋಷ್ಠಿಯಲ್ಲಿ ಕಿರಣ್, ಮಲ್ಲೇಶ್, ಮಂಜುನಾಥ್ ಭಾಗವಹಿಸಿದ್ದರು.

# ಚಕ್ರವರ್ತಿ ಸೂಲಿಬೆಲೆ ಬಂಧನಕ್ಕೆ ಆಗ್ರಹ



» ಚಿತ್ರದುರ್ಗ

ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬಗ್ಗೆ ವಿದ್ಯಾರ್ಥಿಗಳಲ್ಲಿ ಗೊಂದಲ ಮೂಡಿಸಿರುವ ಚಕ್ರವರ್ತಿ ಸೂಲಿಬೆಲೆಯವರನ್ನು ಬಂಧಿಸುವಂತೆ ಒತ್ತಾಯಿಸಿ ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗಗಳ ವಿಭಾಗದವತಿಯಿಂದ ಚಿತ್ರದುರ್ಗ ನಗರ ಪೊಲೀಸ್ ಠಾಣೆಗೆ ಹಿಂದುಳಿದ ವರ್ಗಗಳ ವಿಭಾಗದ ಜಿಲ್ಲಾಧ್ಯಕ್ಷ ಎನ್.ಡಿ.ಕುಮಾರ್ ದೂರು ನೀಡಿದ್ದಾರೆ. 2023-24ನೇ ಸಾಲಿನ ರಾಜ್ಯ ಮಟ್ಟದ ಎಸ್.ಎಸ್.ಎಲ್.ಸಿ. ಪೂರ್ವ ಸಿದ್ದತಾ ಪರೀಕ್ಷಾ ವೇಳಾ ಪಟ್ಟಿಯಲ್ಲಿ ವಿಜ್ಞಾನ ವಿಷಯ ಪರೀಕ್ಷೆ ಸಮಯವನ್ನು ಮಧ್ಯಾಹ್ನ ನಿಗದಿಪಡಿಸಿರುವುದನ್ನು ಮಧ್ಯಾಹ್ನ ನಮಾಜ್ ವೇಳೆಯಲ್ಲಿ ದುರುದ್ದೇಶದಿಂದ ನಿಗಧಿಪಡಿಸಲಾಗಿದೆ ಎಂದು ಟ್ವಿಟರ್‌ನಲ್ಲಿ ಹೇಳಿಕೆಯನ್ನು ನೀಡಿರುವ ಚಕ್ರವರ್ತಿ ಸೂಲಿಬೆಲೆ ಮಕ್ಕಳ ಮುಗ್ಧ ಮನಸ್ಸಿನ ಮೇಲೆ ಗೊಂದಲವನ್ನುಂಟು ಮಾಡಿ ವಿದ್ಯಾರ್ಥಿಗಳಲ್ಲಿ ವಿಷಬೀಜವನ್ನು ಬಿತ್ತುವ ಕಾರ್ಯವನ್ನು ಮಾಡುತ್ತಿದ್ದಾರೆ. ಇದರ ಬಗ್ಗೆ ಮಕ್ಕಳ ಪೋಷಕರು ಮತ್ತು ಸಾರ್ವಜನಿಕರಿಂದ ಯಾವುದೇ ರೀತಿಯಾ ಆಕ್ಷೇಪಗಳು ಬಂದಿಲ್ಲ ಯಾರೂ ಸಹಾ ಆಸಮಾಧಾನವನ್ನು ಸಹಾ ವ್ಯಕ್ತಪಡಿಸಿಲ್ಲ ಎಂದು ದೂರಿನಲ್ಲಿ ಕುಮಾರ್ ತಿಳಿಸಿದ್ದಾರೆ.

# ರೈತರಿಗೆ ಲಾಭದಾಯವಾದ ಪಪ್ಪಾಯಿ ಬೆಳೆ ಬೆಳೆಯಲು ಡಾ.ಶ್ರೀಧರ್ ಸಲಹೆ

» ಚಳ್ಳಕೆರೆ

ರೈತ ಸಮುದಾಯ ಪ್ರತಿವರ್ಷವೂ ತಮ್ಮ ಜಮೀನುಗಳಲ್ಲಿ ಬೆಳೆಯುವ ಬೆಳೆಗಳನ್ನು ಬದಲಾಯಿಸುವ ಮೂಲಕ ಉತ್ತಮ ಆರ್ಥಿಕ ಲಾಭವನ್ನು ಪಡೆಯಬಹುದಾಗಿದೆ. ಇತ್ತೀಚಿನ ದಿನಗಳಲ್ಲಿ ಅತಿಕಡಿಮೆ ವೆಚ್ಚದಲ್ಲೇ ಉತ್ತಮ ಲಾಭ ಪಡೆಯುವಂತಹ ಪಪ್ಪಾಯಿ ಬೆಳೆಯನ್ನು ಸುಧಾರಿತ ಕ್ರಮದಲ್ಲಿ ಬೆಳೆದು ಆರ್ಥಿಕವಾಗಿ ರೈತ ಸಮುದಾಯ



ಸದೃಢವವಾಗಬೇಕೆಂದು ಬಬ್ಬೂರು ತೋಟಗಾರಿಕೆ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ಶ್ರೀಧರ್ ತಿಳಿಸಿದರು.ಅವರು, ತಾಲ್ಲೂಕಿನ ಮನ್ನೇಕೋಟೆ ಗ್ರಾಮದಲ್ಲಿ ಪಪ್ಪಾಯಿ ಬೆಳೆ ಸುಧಾರಿತ ಬೇಸಾಯ ಕ್ರಮ ಕುರಿತು ರೈತರಿಗಾಗಿ ಏರ್ಪಡಿಸಿದ್ದ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ರೈತರು ತಮ್ಮ ಜಮೀನಿನಲ್ಲಿ ಲಭ್ಯವಿರುವ ಪ್ರದೇಶದಲ್ಲೇ ಪಪ್ಪಾಯಗಿಡಗಳನ್ನುಬೆಳೆಯಬಹುದಾಗಿದೆ. ಹೆಚ್ಚು, ಹೆಚ್ಚು ಗಿಡಗಳು ಬೆಳೆದು ಅವುಗಳನ್ನು ಕಾಪಾಡಿದಲ್ಲಿ ರೈತರು ಪಪ್ಪಾಯಿ ಮಾರಾಟದಿಂದ ಲಾಭಪಡೆಯಬಹುದಾಗಿದೆ.ಕರ್ನಾಟಕವೂ ಸೇರಿದಂತೆ ದೇಶದ ಇತರೆ ಜಿಲ್ಲೆಗಳಲ್ಲಿ ಪಪ್ಪಾಯಿಗೆ ಹೆಚ್ಚಿನ ಬೆಲೆ ಇದೆ ಎಂದರು. ಗ್ರಾಮದ ಮುಖಂಡರಾದ ನಾಗರಾಜ, ಈರಣ್ಣ, ಅಂಜಿನಪ್ಪ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ಜಿಲ್ಲೆಯ ಜನರಿಗೆ ಸಮೃದ್ಧ ನೀರಾವರಿ ಕಲ್ಪಿಸಲು ಜಿಲ್ಲಾ ನೀರಾವರಿ ಹೋರಾಟ ಸಮಿತಿ ಸಂಕಲ್ಪ

# ಫೆ.9ರಂದ ಬಂದ್‌ಗೆ ಎಲ್ಲರೂ ಕೈಜೋಡಿಸಿ ಸಹಕರಿಸಿ

» ಚಳ್ಳಕೆರೆ

ಕಳೆದಹಲವಾರುವರ್ಷಗಳಿಂದಚಿತ್ರದುರ್ಗ ಜಿಲ್ಲೆಗೆ ಭದ್ರಾಮೇಲ್ದಂಡೆ ಯೋಜನೆ ಮೂಲಕ ನೀರು ತಂದು ಜಿಲ್ಲೆಯಲ್ಲಿ ಸಮೃದ್ಧ ನೀರಾವರಿ ಪ್ರದೇಶವಾಗಿ ಕಾಣುವ ದೃಷ್ಠಿಯಿಂದ ಜಿಲ್ಲಾ ನೀರಾವರಿ ಹೋರಾಟ ಸಮಿತಿ ನಿರಂತರ ಹೋರಾಟ ನಡೆಸುತ್ತಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ನಿರ್ಲಕ್ಷ್ಯತೆಯನ್ನು ಖಂಡಿಸಿ ಫೆ.9ರ ಶುಕ್ರವಾರ ಬೆಳಗ್ಗೆ 6ರಿಂದ ಮಧ್ಯಾಹ್ನ 4ರ ತನಕ ಬಂದ್ ಆಚರಿಸಲಿದ್ದು, ಇದಕ್ಕೆ ಎಲ್ಲರೂ ಕೈಜೋಡಿಸುವಂತೆ ಹೋರಾಟ ಸಮಿತಿ ಜಿಲ್ಲಾಧ್ಯಕ್ಷ ಬಿ.ಎ.ಲಿಂಗಾರೆಡ್ಡಿ ತಿಳಿಸಿದರು.



ಅವರು, ಬುಧವಾರ ನಗರದ ಪ್ರವಾಸಿಮಂದಿರದಲ್ಲಿ ಫೆ.9ರ ಬಂದ್ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಆಯೋಜಿಸಿದ್ದ ಸಮಾಲೋಚನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಚಿತ್ರದುರ್ಗ ಜಿಲ್ಲೆ ಕಳೆದ ಹಲವಾರು ವರ್ಷಗಳಿಂದ ನೀರಾವರಿ ಸೌಲಭ್ಯದಿಂದ ವಂಚಿತವಾಗಿದೆ. ಕರ್ನಾಟಕದ ಮಧ್ಯಭಾಗದಲ್ಲಿರುವ ಬಯಲುಸೀಮೆಯ ಬೆಂಗಾಡಿಗೆ ನೀರಿನ ಅವಶ್ಯಕತೆ ಇದೆ. ಬಂದ್ ಯಶಸ್ವಿಯಾಗಲು ಹೋರಾಟ ಸಮಿತಿಯೊಂದಿಗೆ ಎಲ್ಲರೂ ಹೆಜ್ಜೆ ಹಾಕಬೇಕು ಎಂದರು.

ಅಖಂಡ ಕರ್ನಾಟಕ ರೈತ ಸಂಘದ ಸಂಸ್ಥಾಪಕ ರಾಜ್ಯಾಧ್ಯಕ್ಷ ಸೋಮಗುದ್ದುರಂಗಸ್ವಾಮಿ ಮಾತನಾಡಿ, ಕಳೆದ 1984ರಲ್ಲಿ ಜಿಲ್ಲೆಗೆ ನೀರು ತರಲು ನಿರ್ಧರಿಸಿ ಹೋರಾಟ ಸಮಿತಿ ಆರಂಬಿಸಲಾಯಿತು. ಕಳೆದ 40 ವರ್ಷಗಳಿಂದ ಹೋರಾಟ ನಡೆಯುತ್ತಲೇ ಬಂದಿದೆ. ಸಂಘಟನೆ ದುರ್ಬಲವಾದಲ್ಲಿ ಹೋರಾಟವೂ ಸಹ ಫಲನೀಡುವುದಿಲ್ಲ. ಜಿಲ್ಲಾ ನೀರಾವರಿ ಹೋರಾಟ ಸಮಿತಿ ಫೆ.9ರಂದು ನಡೆಸುವ ಬಂದ್‌ಗೆ ಎಲ್ಲರೂ ಸಂಪೂರ್ಣ ಸಹಕಾರ ನೀಡಬೇಕು ಎಂದರು. ಕರ್ನಾಟಕ ರೈತ ಸಂಘ ಉಪಾಧ್ಯಕ್ಷರಾದ ರೆಡ್ಡಿಹಳ್ಳಿವೀರಣ್ಣ, ಕೆ.ಪಿ.ಭೂತಯ್ಯ, ಬೇಡರೆಡ್ಡಿಹಳ್ಳಿ ಬಸವರೆಡ್ಡಿ, ಫೆ.9ರ ಬಂದ್ ಯಶಸ್ವಿ ಹಿನ್ನೆಲೆಯಲ್ಲಿ ರೂಪಿಸಲಾದ ಹಲವಾರು ಕಾರ್ಯಕ್ರಮಗಳ ಬಗ್ಗೆ ವಿವರಣೆ ನೀಡಿದರು.

ನೀರಾವರಿ ಹೋರಾಟ ಸಮಿತಿ ಜಿಲ್ಲಾ ಸಂಚಾಲಕ ಚಿಕ್ಕಪ್ಪನಹಳ್ಳಿಷಣ್ಮುಖ ಮಾತನಾಡಿ, ಫೆ.9ರ ಬಂದ್ ಶಾಂತಿಯುತವಾಗಿ ನಡೆಯಬೇಕು. ಯಾವುದೇ ರೀತಿಯ ಸಣ್ಣಪುಟ್ಟ ಗಲಾಟೆಯಾಗದಂತೆ ಎಲ್ಲಾ ಹೋರಾಟಗಾರರು ಎಚ್ಚರಿಕೆ ವಹಿಸಬೇಕು, ನಮ್ಮ ಹೋರಾಟ ಸರ್ಕಾರದಿಂದ ಭದ್ರಾಮೇಲ್ದಂಡೆ ಯೋಜನೆ ಪೂರ್ಣಗೊಂಡು ನೀರು ಹರಿಸುವುದು. ರೈತರ ಬೆಳೆಪರಿಹಾರ,ವಿಮೆ ಹಣ ರೈತ ಕೈಸೇರಬೇಕು, ಯೋಜನೆ ಕಾಮಗಾರಿಗೆ ತೊಡಕಾಗಿರು ಭೂಸ್ವಾಧಿನ ಪ್ರಕ್ರಿಯೆ ಕೂಡಲೇ ಪೂರ್ಣಗೊಳಿಸಬೇಕು, ಚಿತ್ರದುರ್ಗ ಜಿಲ್ಲೆಯ ಲಕ್ಷಾಂತರ ರೈತರ ಕನಸು ನನಸು ಮಾಡಲು ಎಲ್ಲರೂ ಅನುಷ್ಠಾನ ಹೋರಾಟ ಸಮಿತಿ ಸಹಕಾರ ನೀಡಬೇಕು. ಸ್ವಯಂ ಪ್ರೇರಿತ ಬಂದ್‌ಗೆ ಕನ್ನಡಪರ ಸಂಘಟನೆಗೂ ಸೇರಿದಂತೆ ಒಟ್ಟು 56 ಸಂಘಟನೆಗಳು ಬೆಂಬಲಘೋಷಿಸಿವೆ, ಪೂರ್ವಭಾವಿ ಸಭೆಯಲ್ಲಿ 30ಕ್ಕೂ ಹೆಚ್ಚು ಸಂಘಟನೆ ಪಾಲ್ಗೊಂಡಿವೆ. ಎರಡು ಸಾವಿರಕ್ಕೂ ಹೆಚ್ಚು ಜನರು ಪ್ರತಿಭಟನೆಯಲ್ಲಿ ಭಾಗವಹಿಸುವ ನಿರೀಕ್ಷೆ ಇದೆ ಎಂದರು. ಡಿವೈಎಸ್ಪಿ ರಾಜಣ್ಣ, ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್‌ದೇಸಾಯಿ, ಎಐಟಿಯುಸಿ ಮುಖ್ಯಸ್ಥ ಸಿ.ವೈ.ಶಿವರುದ್ರಪ್ಪ, ಕಿಸಾನ್ ಜಿಲ್ಲಾಧ್ಯಕ್ಷ ದೊಡ್ಡ ಉಳ್ಳಾರ್ತಿಕರಿಯಣ್ಣ, ಸಿಐಟಿಯು ಮುಖ್ಯಸ್ಥ ಟಿ.ತಿಪ್ಪೇಸ್ವಾಮಿ, ರೈತ ಮುಖಂಡರಾದ ಶ್ರೀಕಂಠಮೂರ್ತಿ, ಚನ್ನಕೇಶವ, ಆರ್.ಪ್ರಸನ್ನಕುಮಾರ್, ಬಿ.ಫರೀದ್‌ಖಾನ್, ಎಸ್.ಎಚ್.ಸೈಯದ್, ಅನ್ವರ್‌ಮಾಸ್ಟರ್, ಎಂ.ಚೇತನ್‌ಕುಮಾರ್, ಮುಜೀಬುಲ್ಲಾ, ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಮಹಿಳಾ ಸಬಲೀಕರಣ ಘಟಕದ ಹುದ್ದೆಗಳಿಗೆ ಅರ್ಜಿ

» ದಾವಣಗೆರೆ

ಕೇಂದ್ರ ಪುರಸ್ಕೃತ ಮಿಷನ್ ಶಕ್ತಿ ಯೋಜನೆಯಡಿ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಹುದ್ದೆಗಳಿಗೆ ತಾತ್ಕಾಲಿಕ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲಾ ಮಿಷನ್ ಸಂಯೋಜಕರ ಒಂದು ಹುದ್ದೆಗೆ ಸಮಾಜ ವಿಜ್ಞಾನ, ಜೀವ ವಿಜ್ಞಾನ, ಪೌಷ್ಠಿಕತೆ, ಔಷಧ, ಆರೋಗ್ಯ ನಿರ್ವಹಣೆ, ಸಮಾಜ ಕಾರ್ಯ, ಗ್ರಾಮೀಣ ನಿರ್ವಹಣೆಯಲ್ಲಿ ಪದವಿ ಪಡೆದಿದ್ದು. ಸಂಬಂಧಿತ ಕ್ಷೇತ್ರದಲ್ಲಿ ಸರ್ಕಾರೇತರ ಸಂಸ್ಥೆಗಳಲ್ಲಿ 3 ವರ್ಷ ಅನುಭವ ಹೊಂದಿರಬೇಕು. ಹಣಕಾಸು ಸಾಕ್ಷರತೆ ಮತ್ತು ಅಕೌಂಟೆಂಟ್ ತಜ್ಞರ ಒಂದು ಹುದ್ದೆಗೆ ಅರ್ಥಶಾಸ್ತ್ರ, ಬ್ಯಾಂಕಿಂಗ್, ಇತರೆ ವಿಭಾಗದಲ್ಲಿ ಪದವಿ ಪಡೆದಿದ್ದು. ಸರ್ಕಾರೇತರ ಸಂಸ್ಥೆಗಳೊಂದಿಗೆ 3 ವರ್ಷ ಅನುಭವ ಹೊಂದಿರಬೇಕು. ಅರ್ಹರು ಕಚೇರಿಯಿಂದ ಅರ್ಜಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕುವೆಂಪು ನಗರ, 14 ನೇ ಮುಖ್ಯ ರಸ್ತೆ, ಎಂ.ಸಿ.ಸಿ 'ಬಿ' ಬ್ಲಾಕ್, ದಾವಣಗೆರೆ. ಇಲ್ಲಿಗೆ ಖುದ್ದು ಅಥವಾ ಅಂಚೆ ಮೂಲಕ ಫೆ. 22 ರೊಳಗಾಗಿ ಸಲ್ಲಿಸಲು ಉಪನಿರ್ದೇಶಕರಾದ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ.

### ೯ರಂದು ತರಬೇತಿ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಫೆ.9ರಂದು ಬೆಳಗ್ಗೆ 10.30ಕ್ಕೆ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಐಮಂಗಲ ಹೋಬಳಿ ಮತ್ತು ಕಸಬಾ, ಹಿರಿಯೂರಿನ ರೈತರಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೂಕ್ಷ್ಮ ಮತ್ತು ತುಂತುರ ನೀರಾವರಿ ಘಟಕಗಳ ಉಪಯೋಗ ಮತ್ತು ನಿರ್ವಹಣೆ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ವಿಜಯ್‌ಕುಮಾರ್, ಎಜಿಎಂ., ಪ್ರೀಮೀಯರ್ ಇರಿಗೇಷನ್ ಕಂ. ಲಿ., ಬೆಂಗಳೂರು ಇವರು ನೀರಿನ ಸಮರ್ಥ ಬಳಕೆ, ಹನಿ ನೀರಾವರಿ ಮತ್ತು ಸ್ಪ್ರೀಂಕ್ಲರ್ ಘಟಕಗಳ ಉಪಯೋಗ ಮತ್ತು ಅವುಗಳ ನಿರ್ವಹಣೆಯ ಕುರಿತು ವಿಷಯ ಮಂಡನೆ ಮತ್ತು ಪ್ರಾತ್ಯಕ್ಷಿಕೆ ನೀಡುವರು. ಹಿರಿಯೂರು ತಾಲ್ಲೂಕಿನ ಐಮಂಗಲ ಹೋಬಳಿ ಮತ್ತು ಕಸಬಾ ಹೋಬಳಿ ಹಿರಿಯೂರಿನ ಆಸಕ್ತ 60 ಜನ ರೈತಭಾಂದವರು ಈ ತರಬೇತಿಯಲ್ಲಿ ಭಾಗವಹಿಸಲು ರಜನೀಕಾಂತ. ಆರ್ ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿಕೇಂದ್ರ, ಬಬ್ಬೂರು ಫಾರಂ (8277931058), ಎಂ.ಉಷಾರಾಣಿ, ಸಹಾಯಕ ಕೃಷಿ ನಿರ್ದೇಶಕರು (ರೈ.ಮ) 9980730696, ಟಿ.ಪಿ.ರಂಜಿತಾ, ಕೃಷಿ ಅಧಿಕಾರಿ (8277930959), ಸಿಕಂದರ್ ಬಾಷಾ, ಕೃಷಿ ಅಧಿಕಾರಿ (8277931058) ಮತ್ತು ಪವಿತ್ರಾ ಎಂ. ಜೆ. (9535412286) ಅವರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದೆ. ಮೊದಲು ನೋಂದಾವಣಿ ಮಾಡಿಕೊಂಡ 60 ಜನ ರೈತ ಭಾಂದವರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು.

### ಮುಖ್ಯಮಂತ್ರಿಗಳ ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ

» ಚಿತ್ರದುರ್ಗ

ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಫೆ. 09 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಮುಖ್ಯಮಂತ್ರಿಗಳು ಅಂದು ಬೆಳಿಗ್ಗೆ ಗಂಟೆಗೆ ಬೆಂಗಳೂರಿನಿನ ಹೆ□□ಎಎಲ್ ವಿಮಾನ ನಿಲ್ದಾಣದಿಂದ ಹೆಲಿಕಾಪ್ಟರ್ ಮೂಲಕ ಹೊರಟು ಬೆಳಿಗ್ಗೆ 11.30 ಗಂಟೆಗೆ ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲ್ಲೂಕು ಬ್ರಹ್ಮವಿದ್ಯಾನಗರ ಸುಕ್ಷೇತ್ರ ಆವರಣದಲ್ಲಿನ ಹೆಲಿಪ್ಯಾ□□ಗೆ ಆಗಮಿಸುವರು. ನಂತರ ಇಲ್ಲಿನ ಭಗೀರಥ ಪೀಠ ಮಹಾಸಂಸ್ಥಾನ ಮಠದ ವತಿಯಿಂದ ಆಯೋಜಿಸಿರುವ ಜಗದ್ಗುರು ಡಾ. ಪುರುಷೋತ್ತಮಾನಂದಪುರಿ ಮಹಾಸ್ವಾಮಿಗಳ 25 ನೇ ವರ್ಷದ ಪಟ್ಟಾಭಿಷೇಕದ ರಜತ ಮಹೋತ್ಸವ ಹಾಗೂ ರಾಷ್ಟ್ರೀಯ ಭಗೀರಥ ಜಯಂತ್ಯೋತ್ಸವ ಮತ್ತು ಉಪ್ಪಾರರ ಬೃಹತ್ ಸಮಾವೇಶ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮುಖ್ಯಮಂತ್ರಿಗಳು ಅದೇ ದಿನ ಮಧ್ಯಾಹ್ನ 01 ಗಂಟೆಗೆ ಹೆಲಿಕಾಪ್ಟರ್ ಮೂಲಕ ದಾವಣಗೆರೆ ಜಿಲ್ಲೆ ಹರಿಹರ ತಾಲ್ಲೂಕಿನ ರಾಜನಹಳ್ಳಿಗೆ ತೆರಳುವರು ಎಂದು ಮುಖ್ಯಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿ ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ಮಕ್ಕಳ ಹಬ್ಬ

» ಚಿತ್ರದುರ್ಗ

ಕರ್ನಾಟಕ ಬಾಲವಿಕಾಸ ಅಕಾಡೆಮಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಮಕ್ಕಳಿಗಾಗಿ ಜಿಲ್ಲಾಮಟ್ಟದ ಮಕ್ಕಳ ಹಬ್ಬದ ಅಂಗವಾಗಿ ವಿವಿಧ ಕಲಾ ಪ್ರಕಾರಗಳ ಕಲಾ ಪ್ರದರ್ಶನ ಕಾರ್ಯಕ್ರಮ ಇದೇ ಫೆ.17ರಂದು ಬೆಳಿಗ್ಗೆ 9.30ಕ್ಕೆ ಚಿತ್ರದುರ್ಗ ನಗರದ ಜಿಲ್ಲಾ ಬಾಲಭವನದ ಆವರಣದಲ್ಲಿ ವೈಯಕ್ತಿಕ ವಿಭಾಗದ ಪ್ರದರ್ಶನಗಳಾದ ಕಾವ್ಯ, ಕಥೆ, ಚಿತ್ರಕಲೆ, ಜನಪದ ಕಲೆ, ಕ್ಲೇ ಮಾಡಲಿಂಗ್, ಪಾರಂಪರಿಕ ಕಲೆಗಳ ಕ್ರೀಡೆ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ. ಫೆ.28 ರಂದು ಬೆಳಿಗ್ಗೆ 9.30ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ನಾಟಕ ಹಾಗೂ ನೃತ್ಯ ಪ್ರಕಾರದ 15 ಕಲಾ ತಂಡಗಳ ಕಲಾ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

### ಬೆಳೆವಿಮೆ ಕಂಪನಿಗೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ

# ಫೆಬ್ರವರಿ ಅಂತ್ಯದ ವೇಳೆಗೆ ಪರಿಹಾರ ಹಣ ನೀಡಿ

» ಚಿತ್ರದುರ್ಗ

ಬೆಳೆ ವಿಮೆಗಾಗಿ ನೊಂದಾಯಿಸಿಕೊಂಡಿರುವ ರೈತರ ಖಾತೆಗೆ ಇದೇ ಫೆಬ್ರವರಿ ಅಂತ್ಯದ ವೇಳೆಗೆ ಇದೇ ಫೆಬ್ರವರಿ ಅಂತ್ಯದ ವೇಳೆಗೆ ನಿಯಮಾನುಸಾರ ಬೆಳೆವಿಮೆ ಪರಿಹಾರ ಹಣ ಜಮೆಯಾಗುವಂತೆ ಕೃಷಿ ಹಾಗೂ ವಿಮಾ ಕಂಪನಿ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದರು.

ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 2023–24ನೇ ಫಸಲ್ ಭೀಮಾ ಯೋಜನೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಈಗಾಗಲೇ ಜಿಲ್ಲೆಯಾದ್ಯಂತ ಬೆಳೆ ಸಮೀಕ್ಷೆ ಕಾರ್ಯ ಪೂರ್ಣಗೊಂಡಿದೆ. ಕೇವಲ ದತ್ತಾಂಶಗಳ ಮರು ಪರಿಶೀಲನೆ ಮಾತ್ರ ಬಾಕಿ ಉಳಿದಿದೆ. ಈ ಕಾರ್ಯವನ್ನು 15 ದಿನದ ಒಳಗೆ ಪೂರ್ಣಗೊಳಿಸಿ ಅರ್ಹ ರೈತರ ಖಾತೆ ನೇರವಾಗಿ ಪರಿಹಾರದ ಹಣವನ್ನು ಜಮೆ ಮಾಡಬೇಕು. ಇದಕ್ಕೆ ಯಾವುದೇ ಸಬೂಬುಗಳನ್ನು ನೀಡಬಾರದು. ಬೆಳೆ ವಿಮೆ ಪರಿಹಾರದ ಕಾರ್ಯ ಸಂಪೂರ್ಣವಾಗಿ ಪಾರದರ್ಶಕವಾಗಿ ಇರಬೇಕು. ತಾಂತ್ರಿಕ ಕಾರಣಗಳಿಂದ ಬೆಳೆವಿಮೆ ಪರಿಹಾರದ ಹಣ ಬಿಡುಗಡೆ ಆಗದಿದ್ದರೆ, ಅಥವಾ ಕೆಲವು ರೈತರ ಖಾತೆಗೆ ಜಮೆ ಆಗದಿದ್ದರೆ ಈ ಕುರಿತು ಪ್ರತಿ ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳಿಗೂ ಮಾಹಿತಿ ನೀಡಬೇಕು. ರೈತರು ಗೊಂದಲಕ್ಕೆ ಒಳಗಾಗದಂತೆ ತಿಳಿ ಹೇಳಬೇಕು. ಕೃಷಿ ವಿಮಾ ಕಂಪನಿಗಳು ಬೆಳೆ ಪರಿಹಾರದ ಕಾರ್ಯವನ್ನು ವ್ಯಾಪಾರೀಕರಣದ ದೃಷ್ಠಿಯಿಂದ ನೋಡಬಾರದು. ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸಬೇಕು. ಪ್ರತಿ ತಾಲ್ಲೂಕುಗಳಲ್ಲಿಯೂ ವಿಮಾ ಕಂಪನಿ ಪ್ರತಿನಿಧಿಗಳನ್ನು ನೇಮಕ ಮಾಡಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

**ಬೆಳೆವಿಮೆ ಕುರಿತು ರೈತರಿಗೆ ಕಾರ್ಯಗಾರ ಆಯೋಜಿಸಿ:** ಬೆಳೆವಿಮೆ ನೀತಿಗಳು, ಯಾವ ಸಂದರ್ಭದಲ್ಲಿ ವಿಮೆ ಕಟ್ಟಬೇಕು. ವಿಮೆಗೆ ಕಟ್ಟಿದ ಹಣವನ್ನು ಬೇರೆ ಬೆಳೆಗಳಿಗೆ ಯಾವ ರೀತಿ ಬದಲಾಯಿಸಿಕೊಳ್ಳಬೇಕು ಎಂಬುದು ರೈತರಿಗೆ ಮಾಹಿತಿಯ ಕೊರತೆ ಇರುತ್ತದೆ. ಹೀಗಾಗಿ ಕೃಷಿ ಇಲಾಖೆ ವತಿಯಿಂದ ಪ್ರತಿ ಹೊಬಳಿ ಮಟ್ಟದ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರಿಗೆ ಬೆಳೆವಿಮೆ ಕುರಿತು ಕಾರ್ಯಗಾರ ಆಯೋಜಿಸಬೇಕು. ಇದರಲ್ಲಿ ಪ್ರಗತಿ ಪರ ರೈತರು, ರೈತರ ಮುಖಂಡರು ಪಾಲ್ಗೊಳ್ಳುವಂತೆ ಮಾಡಿ ಬೆಳೆ ವಿಮೆ, ಬೆಳೆ ಪರಿಹಾರ, ಬೆಳೆ ಸಮೀಕ್ಷೆ ಕುರಿತು ಮಾಹಿತಿ ನೀಡಬೇಕು. ಬೆಳೆ ಸಮೀಕ್ಷೆ ಕೈಗೊಳ್ಳಬೇಕಾದ ವೈಜ್ಞಾನಿಕ ವಿಧಾನಗಳ ಬಗ್ಗೆ ರೈತರಿಗೆ ತಿಳುವಳಿಕೆ ನೀಡಿ. ಸಮೀಕ್ಷೆ ಸಂದರ್ಭದಲ್ಲಿ ತಮ್ಮ ಜಮೀನುಗಳಲ್ಲಿ ಇದ್ದು, ಸಮೀಕ್ಷೆಯಲ್ಲಿ ಯಾವುದೇ ವ್ಯತ್ಯಾಸವಾಗದಂತೆ ನೋಡಿಕೊಳ್ಳಲು ಇದರಿಂದ ಸಾಧ್ಯವಾಗುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ರೈತರು ಕೂಡ ತಮ್ಮ ಜಮೀನು ಹಾಗೂ ಬೆಳೆಗಳ ಬಗ್ಗೆ ಜಾಗರೂಕತೆ ವಹಿಸಬೇಕು. ಪಹಣಿಗಳಲ್ಲಿ ಬೆಳೆ ತಪ್ಪಾಗಿ ನಮೂದು ಅದರೆ ಅದು ರೈತರಿಗೆ ತೊಂದರೆಯಾಗುತ್ತದೆ. ಸ್ಮಾರ್ಟ್ ಪೋನ್‌ಗಳಲ್ಲಿ ಜಮೀನಿನ ಮಾಹಿತಿಯನ್ನು ಪಡೆದುಕೊಳ್ಳಬಹುದು ಎಂದರು.

2023–24ನೇ ಸಾಲಿನಲ್ಲಿ ಜಿಲ್ಲೆಯ 2,59,486 ಎಕರೆ ಕೃಷಿ ಭೂಮಿಯ ಪೈಕಿ, 1,05,000 ಎಕರೆ ಪ್ರದೇಶಕ್ಕೆ 80,633 ರೈತರು ಬೆಳೆ ವಿಮೆ ನೊಂದಾವಣಿ ಮಾಡಿಸಿದ್ದಾರೆ. ಇದರಲ್ಲಿ ಶೇಂಗಾ 38,496, ಮುಸುಕಿ ಜೋಳ 27,396 , ತೊಗರಿ 4,109, ರಾಗಿ 2,719, ಸಾಮೆ 3,790, ಹೆಸರು 2,427, ಹತ್ತಿ 1,960, ಸೂರ್ಯಕಾಂತಿ 675, ಟೊಮ್ಯಾಟೊ ಬೆಳೆಗೆ 97, ಎಳ್ಳು 17, ಹುರುಳಿ 70, ನವಣೆ 376, ಸಜ್ಜೆ 51, ಕೆಂಪು ಮೆಣಸಿನಕಾಯಿಗೆ 61 ರೈತರು ಬೆಳೆ ವಿಮೆಗೆ ನೊಂದಾಯಿಸಲಾಗಿದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಸಭೆಯಲ್ಲಿ ಮಾಹಿತಿ ನೀಡಿದರು.

ರಾಜ್ಯದಲ್ಲಿ ಖಾಸಗಿ ಬೆಳೆ ವಿಮೆ ಕಂಪನಿಗಳು ರೈತರನ್ನು ಶೋಷಣೆ ಮಾಡುತ್ತಿವೆ. ಬೆಳೆ ವಿಮೆ ಕಟ್ಟಿಸಿಕೊಳ್ಳಲು ದಿನಾಂಕ ನಿಗದಿ ಮಾಡುವ ಕಂಪನಿಗಳು, ಸಕಾಲದಲ್ಲಿ ಬೆಳೆವಿಮೆಯ ಪರಿಹಾರದ ಮೊತ್ತವನ್ನು ಪಾತಿಸಲು ದಿನಾಂಕ ನಿಗದಿ ಮಾಡುವುದಿಲ್ಲ. ರಾಜ್ಯದಲ್ಲಿ ಬರ ಘೋಷಣೆ ಆದ ತಕ್ಷಣ ಮಧ್ಯಂತರ ಪರಿಹಾರವನ್ನು ಬೆಳೆ ವಿಮೆ ಕಂಪನಿ ನೀಡಬೇಕಿತ್ತು. ವಿವಿಧ ಜಿಲ್ಲೆಗಳಲ್ಲಿ ಮಧ್ಯಂತರ ಪರಿಹಾರ ನೀಡಲಾಗಿದೆ. ಜಿಲ್ಲೆಯ ರೈತರಿಗೆ ಮಾತ್ರ ನೀಡಿಲ್ಲ. ಬೆಳೆವಿಮೆ ಕಂಪನಿಗಳು ನೊಂದಣಿ ಮಾಡಿರುವ ರೈತರಿಗೆ ಯಾವುದೇ ರೀತಿ ಬಾಂಡ್‌ಗಳನ್ನು ನೀಡುತ್ತಿಲ್ಲ. ಇತರೆ ಜೀವ ವಿಮೆ ಕಂಪನಿಗಳ ಮಾದರಿಯಲ್ಲಿ ಬೆಳೆವಿಮೆ ಬಾಂಡ್‌ಗಳನ್ನು ನೀಡಬೇಕು. ನೆರೆಯ ಆಂದ್ರ ಹಾಗೂ ತೆಲಂಗಾಣ ರಾಜ್ಯದಲ್ಲಿನ ಮಾದರಿಯಂತೆ ನಮ್ಮಲ್ಲಿಯೂ ಸರ್ಕಾರಿ ವಿಮಾ ಕಂಪನಿಗಳೇ ಬೆಳೆವಿಮೆಯನ್ನು ನೊಂದಾಯಿಸಿಕೊಳ್ಳುವಂತಾಗಬೇಕು ಎಂದು ರೈತ ಮುಖಂಡ ಕೆ.ಪಿ.ಭೂತಯ್ಯ ಸಭೆಯಲ್ಲಿ ಮನವಿ ಮಾಡಿಕೊಂಡರು.

# ತುರ್ತು ಸಂದರ್ಭಗಳಲ್ಲಿ ರಕ್ಷಣೆ

### ದಾವಣಗೆರೆಯಲ್ಲಿ ಎನ್‌ಡಿಆರ್‌ಎಫ್ ತಂಡದಿಂದ ಅಣಕು ರಕ್ಷಣಾ ಪ್ರದರ್ಶನ

» ದಾವಣಗೆರೆ

ತುರ್ತು ಸಂದರ್ಭಗಳಲ್ಲಿ ಜನರು ಮತ್ತು ಆಸ್ತಿ, ಪಾಸ್ತಿಗಳ ರಕ್ಷಣೆ ಮಾಡಿಕೊಳ್ಳುವ ಬಗ್ಗೆ ಎನ್.ಡಿ.ಆರ್.ಎಫ್ ಮತ್ತು ಎಸ್.ಡಿ.ಆರ್.ಎಫ್ ತಂಡದಿಂದ ಅಣಕು ಪ್ರದರ್ಶನಗಳನ್ನು ಏರ್ಪಡಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಎನ್.ಡಿ.ಆರ್.ಎಫ್ ಮತ್ತು ಎಸ್.ಡಿ.ಆರ್.ಎಫ್ ತಂಡದ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕೇಂದ್ರ ಹಾಗೂ ರಾಜ್ಯ ವಿಪತ್ತು ನಿರ್ವಹಣಾ ತಂಡದಿಂದ ಅಣಕು ಪ್ರದರ್ಶನವನ್ನು ಫೆಬ್ರವರಿ 6 ರಿಂದ 19 ರ ವರೆಗೆ ವಿವಿಧ ಸ್ಥಳಗಳಲ್ಲಿ ಅಣಕು ಪ್ರದರ್ಶನ ಏರ್ಪಡಿಸುವ ಮೂಲಕ ಸಾರ್ವಜನಿಕರಿಗೆ, ಶಾಲಾ, ಕಾಲೇಜಿನ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಗುತ್ತದೆ ಎಂದರು.



ಫೆಬ್ರವರಿ6.ರಂದು ತಹಶೀಲ್ದಾರ್, ಅಗ್ನಿಶಾಮಕ, ಅರಣ್ಯ, ಪೊಲೀಸ್, ನೆಹರು ಯುವ ಕೇಂದ್ರ, ಗೃಹರಕ್ಷಕದಳ, ಹಾಗೂ ಇತತರಿಗೆ, ಫೆ.7 ರಂದು ತುಂಗಭದ್ರಾ ಸಭಾಂಗಣದಲ್ಲಿ ಅರ್ಧ ದಿನ ತಹಶೀಲ್ದಾರ್, ಜಿಲ್ಲಾಧಿಕಾರಿಗಳ ಕಚೇರಿ, ಅರಣ್ಯ, ಪೊಲೀಸ್, ಅಗ್ನಿ ಶಾಮಕ ಹಾಗೂ ಇತರೆ ಇಲಾಖೆಯವರಿಗೆ ತುರ್ತು ರಕ್ಷಣಾ ಕಾರ್ಯಗಳ ನಿರ್ವಹಣೆ, ಫೆ.8 ತುರ್ತು ನಿರ್ವಹಣೆಗೆ ಸಂಬಂಧಿಸಿದಂತೆ ದಾವಣಗೆರೆ ದೇವರಾಜ ಅರಸು ಮೈದಾನದಲ್ಲಿ, ಫೆ.9 ರಂದು ಹರಿಹರದ ಗಾಂಧಿ ಮೈದಾನ, ಫೆ.10 ರಂದು ದಾವಣಗೆರೆ ವಿದ್ಯಾನಗರದಲ್ಲಿನ ತರಳಬಾಳು ಶಾಲೆಯಲ್ಲಿ ತುರ್ತು ರಕ್ಷಣೆ, ಫೆ.12 ರಂದು ಹಾಲವರ್ತಿ ಬನ್ಸಲ್ ಆರಾಧ್ಯ ಸ್ಟೀಲ್ ಪ್ರೈ.ಲಿ ಇಲ್ಲಿಗೆ ಭೇಟಿ ನೀಡಿ ಕೆಮಿಕಲ್ ಅವಘಡಗಳ ನಿಯಂತ್ರಣದ ಕುರಿತು, ಫೆ.13 ರಂದು ನಿಟುವಳ್ಳಿಯಸಿದ್ದಗಂಗಾ ಶಾಲೆಯಲ್ಲಿ ತುರ್ತು ಸಂದರ್ಭ ನಿರ್ವಹಣೆ.

ಫೆ.14 ರಂದು ದಾವಣಗೆರೆಯಲ್ಲಿ ಸೀತಮ್ಮ ಹೈಸ್ಕೂಲ್‌ನಲ್ಲಿ ಅವಘಡಗಳಿಂದ ಶಾಲಾ ರಕ್ಷಣೆ ಮತ್ತು ವನಮಹೋತ್ಸವ, ಫೆ.15 ರಂದು ಹರಿಹರದ ಮರಿಯನಿವಾಸ್ ಶಾಲೆಯಲ್ಲಿ ತುರ್ತು ಮುಂಜಾಗ್ರತ ಕ್ರಮ, ಫೆ.16 ರಂದು ದಾ.ವಿ.ವಿ.ನಲ್ಲಿ ಸ್ವಯಂ ಸೇವಕರಿಗೆ ಒಂದು ದಿನದ ತರಬೇತಿ, ಫೆ.17 ರಂದು ದಾವಣಗೆರೆ ತಾ.ಪಂ.ನಲ್ಲಿ ವಿಶೇಷಚೇತನರನ್ನು ನಾಗರೀಕ ಸೇವೆಯಲ್ಲಿ ಸಂಘಟನೆ ಬಗ್ಗೆ ತರಬೇತಿ, ಫೆ.19 ರಂದು ಸೈಬರ್ ಸೆಕ್ಯೂರಿಟಿ ಮತ್ತು ಸಾಮಾಜಿಕ ಮಾಧ್ಯಮಗಳ ಬಳಕೆ ಕುರಿತು ತರಬೇತಿ ನಡೆಯಲಿದೆ.ತುರ್ತು ಸಂದರ್ಭಗಳಲ್ಲಿ ಸಾರ್ವಜನಿಕರು ಸಂಪರ್ಕಿಸಲು ನೀಡಿರುವ ಸಹಾಯವಾಣಿ ಸಂಖ್ಯೆಗಳನ್ನು ಜಿಲ್ಲೆಯ ಪ್ರತಿ ಕಚೇರಿಗಳಲ್ಲಿ ಮತ್ತು ಶಾಲಾ, ಕಾಲೇಜು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಪ್ರಕಟಿಸಲು ಸೂಚಿಸಲಾಯಿತು. ಯಾವುದೇ ಸಾರ್ವಜನಿಕ ಆಸ್ತಿ, ಜನ, ಜಾನುವಾರು, ಜೀವ ಹಾನಿಯಾಗದಂತೆ ಎಂತಹ ಸಂದರ್ಭದಲ್ಲಿಯೂ ಜಾಗೃತಿಯಿಂದ ಸಿದ್ದವಿರಲು ಮತ್ತು ರಕ್ಷಣಾತ್ಮಕ ಕಾರ್ಯಗಳ ಬಗ್ಗೆ ಜಾಗೃತಿ ಮೂಡಿಸಲು ಸೂಚಿಸಲಾಯಿತು.ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರಿನ್ ಭಾನು ಎಸ್.ಬಳ್ಳಾರಿ, ಉಪಕಾರ್ಯದರ್ಶಿ ಕೃಷ್ಣನಾಯ್ಕ, ಎನ್.ಡಿ.ಆರ್.ಎಫ್ ತಂಡದ ಅಜಯ್ ಕುಮಾರ್ ಮತ್ತು ತಂಡದ ಇತರೆ ಸದಸ್ಯರು ಉಪಸ್ಥಿತರಿದ್ದರು.

### ಚುನಾವಣಾ ತರಬೇತಿಯಲ್ಲಿ ಅಪರ ಜಿಲ್ಲಾಧಿಕಾರಿಕುಮಾರಸ್ವಾಮಿ ಸೂಚನೆ

**ಚುನಾವಣಾ ಸಿಬ್ಬಂದಿ ನಿಯೋಜಿಸಿದ ಕಾರ್ಯವನ್ನು ಪ್ರಾಮಾಣಿಕವಾಗಿ ಮತ್ತು ಬದ್ಧತೆಯಿಂದ ನಿರ್ವಹಿಸಿ**



» ಚಿತ್ರದುರ್ಗ

ಚುನಾವಣಾ ಸಿಬ್ಬಂದಿಯಾಗಿ ಆಯ್ಕೆಯಾದ ನಂತರ ಖುಷಿಯಾಗಿ ಕಾರ್ಯನಿರ್ವಹಿಸಬೇಕು. ನಿಯೋಜಿಸಿದ ಕಾರ್ಯಕ್ರಮವನ್ನು ಪ್ರಾಮಾಣಿಕವಾಗಿ ಮತ್ತು ಬದ್ಧತೆಯಿಂದ ನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು. ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ಚುನಾವಣಾ ತರಬೇತಿ ಹಾಗೂ ನಿರ್ವಹಣಾ ಕೋಶದ ಅಡಿಯಲ್ಲಿ ಚುನಾವಣಾ ತರಬೇತಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಚುನಾವಣಾ ಸಿಬ್ಬಂದಿ ಪ್ರತಿ ಚುನಾವಣೆಗಳನ್ನು ಸ್ಪರ್ಧಾ ಮನೋಭಾವನೆಯಿಂದ ಸ್ವೀಕರಿಸಬೇಕು. ಮಸ್ಟರಿಂಗ್ ಮತ್ತು ಡಿ ಮಸ್ಟರಿಂಗ್ ಸಮಯದಲ್ಲಿ ಪ್ರಪತ್ರಗಳನ್ನು ಸರಿಯಾಗಿ ಜೋಡಿಸಿಕೊಂಡು ಕಾರ್ಯನಿರ್ವಹಿಸಬೇಕು. ಮತ ಯಂತ್ರಗಳ ಬಗ್ಗೆ ಪ್ರಾಯೋಗಿಕ ತರಬೇತಿಯನ್ನು ಸರಿಯಾಗಿ ಪಡೆದುಕೊಳ್ಳಬೇಕು. ಚುನಾವಣೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಸ್ನೇಹಿತರೊಂದಿಗೆ ಚರ್ಚಿಸಿ ಪರಿಹಾರ ಕಂಡುಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾಮಟ್ಟದ ಮಾಸ್ಟರ್ ಟ್ರೈನರ್ ನಾಗಭೂಷಣ್ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದರು. ಜಿಲ್ಲಾಧಿಕಾರಿಗಳ ತರಬೇತಿ ನಿರ್ವಹಣಾ ಕೋಶದ ನೋಡಲ್ ಅಧಿಕಾರಿ ಜಗದೀಶ್ ಹೆಬ್ಬಳ್ಳಿ, ಜಿಲ್ಲಾ ಚುನಾವಣಾ ಶಿರಸ್ತೆದಾರ ಮಲ್ಲಿಕಾರ್ಜುನ ಇದ್ದರು. ಎಸ್.ಕೆ.ಮಂಜುನಾಥ್ ಸ್ವಾಗತಿಸಿ, ನಿರೂಪಿಸಿದರು.

## ಪ್ರಮುಖ ಸುದ್ದಿ

### ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧಿಸಲು ರಘುಚಂದನ್ ಭರದ ತಯಾರಿ, ಕ್ಷೇತ್ರದ ವಿವಿಧ ಗ್ರಾಮಗಳಿಗೆ ಭೇಟಿ

# ಮಾಜಿ ಶಾಸಕ ಮಂಡಿಮಠ ಆಶೀರ್ವಾದ ಪಡೆದ ರಘುಚಂದನ್

» ಚಳ್ಳಕೆರೆ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಪ್ರಬಲ ಆಕಾಂಕ್ಷಿಯಾದ ಶಾಸಕ ಎಂ.ಚಂದ್ರಪ್ಪನವರ ಸುಪುತ್ರ ರಘುಚಂದನ್ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬುಧವಾರ ಮಿಂಚಿನ ಸಂಚಾರ ನಡೆಸಿ ಬಿಜೆಪಿ ಹಿರಿಯ ಮುಖಂಡರು, ಕಾರ್ಯಕರ್ತರೊಡನೆ ಸಮಾಲೋಚನೆ ನಡೆಸಿದರು.

ಚಳ್ಳಕೆರೆ ನಗರಕ್ಕೆ ಆಗಮಿಸಿದ ಕೂಡಲೇ ಭಾರತೀಯ ಜನತಾಪಕ್ಷದ ಹಿರಿಯ ಮುಖಂಡ, ಮಾಜಿ ಶಾಸಕ ಜಿ.ಬಸವರಾಜಮಂಡಿಮಠರವರನ್ನು ಅವರ ನಿವಾಸದಲ್ಲಿ ಭೇಟಿ ನೀಡಿ, ಅವರನ್ನು ಸನ್ಮಾನಿಸಿ, ಆಶೀರ್ವಾದಿಸುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಬಸವರಾಜಮಂಡಿಮಠ, ಕಳೆದ ವರ್ಷದ ವಿಧಾನಸಭಾ ಚುನಾವಣೆಯಲ್ಲಿ ಅನಿವಾರ್ಯವಾಗಿ ಯುವಕನೊಬ್ಬನನ್ನು ಗೆಲ್ಲಿಸಬೇಕೆಂಬ ದೃಷ್ಠಿಯಿಂದ ಕೆಲವು ದಿನಗಳ ಅವರೊಂದಿಗೆ ಓಡಾಟ ನಡೆಸಿದೆ. ಆದರೆ, ಈ ಕ್ಷೇತ್ರದ ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು ಇಂದಿಗೂ ನನ್ನನ್ನು ಬಿಜೆಪಿಯ ಮುಖಂಡರೆಂದೇ ಭಾವಿಸಿದ್ದು, ಅವರ ಭಾವನೆಗೆ ನಾನು ಸಹ ಸಕರಾತ್ಮಕವಾಗಿ ಸ್ಪಂದಿಸುತ್ತಿದ್ದು, ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಗೆಲುವಿಗೆ ಪ್ರಾಮಾಣಿಕ ಪ್ರಯತ್ನ ನಡೆಸುವ ಭರವಸೆ ನೀಡಿದರು. ಗಾಂಧಿನಗರದ ಬಿಜೆಪಿಯ ಹಳೇ ಕಾರ್ಯಾಲಯದಲ್ಲಿ ಪಕ್ಷದ ಕಾರ್ಯಕರ್ತರನ್ನು ಭೇಟಿ ಮಾಡಿ ಮಾತನಾಡಿದ ಅವರು, ಕಳೆದ ಸುಮಾರು 30 ವರ್ಷಗಳಿಂದ ನನ್ನ ತಂದೆ, ಶಾಸಕ ಎಂ.ಚಂದ್ರಪ್ಪ ರಾಜಕೀಯ ಕ್ಷೇತ್ರದಲ್ಲಿ ಸಾಕಷ್ಟು ಕಾರ್ಯನಿರ್ವಹಿಸಿದ್ದಾರೆ. ನಾನು ಇದೇ ತಾಲ್ಲೂಕಿನ ದೊಡ್ಡ ಉಳ್ಳಾರ್ತಿ ಗ್ರಾಮದವರನಾಗಿದ್ದು, ಜನರ ಕಷ್ಟಕಾರ್ಪಣ್ಯಗಳಿಗೆ ಸ್ಪಂದಿಸಲು ರಾಜಕೀಯ ಕ್ಷೇತ್ರಕ್ಕೆ ಪಾದಾರ್ಪಣೆ ಮಾಡಿದ್ದೇನೆ. ಕಳೆದ ಕೆಲವು ವರ್ಷಗಳಿಂದ ಪಕ್ಷದ ಅನೇಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬಂದಿದ್ದೇನೆ. ಹೊಳಲ್ಕೆರೆ, ಹೊಸದುರ್ಗ, ಹಿರಿಯೂರು, ಮೊಳಕಾಲ್ಮೂರು ಹಾಗೂ ಚಳ್ಳಕೆರೆ ಕ್ಷೇತ್ರದ ಕಾರ್ಯಕರ್ತರೊಂದಿಗೆ ಚರ್ಚಿಸಿದ್ದು, ಉತ್ತಮ ಅಭಿಪ್ರಾಯವಿದೆ ಎಂದರು.



ಕಾರ್ಯಕರ್ತರ ಸಭೆಯಲ್ಲಿ ಮಾಜಿ ಅಧ್ಯಕ್ಷ ಡಿ.ಸೋಮಶೇಖರಮಂಡಿಮಠ, ಬಿಜೆಪಿ ಜಿಲ್ಲಾ ಮುಖಂಡರಾದ ಜೆ.ಪಿ.ಜಯಪಾಲಯ್ಯ, ಸಿ.ಎಸ್.ಪ್ರಸಾದ್, ಬಿ.ಎಸ್.ಶಿವಪುತ್ರಪ್ಪ, ಬಿ.ನಾಗರಾಜು, ಶ್ರೀನಿವಾಸ್, ಮಾತೃಶ್ರೀಎನ್.ಮಂಜುನಾಥ, ಉಳ್ಳಾರ್ತಿರಾಜು ಮುಂತಾದವರು ಉಪಸ್ಥಿತರಿದ್ದರು. ಬಿಜೆಪಿ ಮುಖಂಡ ರಘುಚಂದನ್ ದೊಡ್ಡೇರಿಯ ಶ್ರೀಕನ್ನೇಶ್ವರಮಠಕ್ಕೆ ಭೇಟಿ ನೀಡಿ ಶ್ರೀಮಲ್ಲಿಕಾರ್ಜುನಸ್ವಾಮೀಜಿಯವರ ದರ್ಶನ ಪಡೆದರು. ನಂತರ ಜಾಜೂರು ಜಿಲ್ಲಾ ಪಂಚಾಯಿತಿ ಕ್ಷೇತ್ರಕ್ಕೆ ಅಲ್ಲಿ ಹಲವಾರು ಗ್ರಾಮಗಳಿಗೆ ಭೇಟಿ ನೀಡಿ ಜನರೊಂದಿಗೆ ಪ್ರಧಾನಮಂತ್ರಿ ನರೇಂದ್ರಮೋದಿಯವರ ಜನಪ್ರಿಯ ಕಾರ್ಯಕ್ರಮಗಳ ಬಗ್ಗೆ ಸಾರ್ವಜನಿಕರೊಂದಿಗೆ ಚರ್ಚೆ ನಡೆಸಿದರು. ಮೋದಿ ಮತ್ತೊಮ್ಮೆ ಈ ದೇಶದ ಪ್ರಧಾನಿಯಾಗಲು ಬಿಜೆಪಿಯನ್ನು ಬಲಪಡಿಸುವಂತೆ ಅವರು ಸಾರ್ವಜನಿಕರಲ್ಲಿ ವಿನಂತಿಸಿದರು. ಈ ಬಾರಿ ಅಭ್ಯರ್ಥಿಯಾಗಲು ಬಯಸಿದ್ದು, ಎಲ್ಲರೂ ಆಶೀರ್ವಾದಿಸುವಂತೆ ಮನವಿ ಮಾಡಿದರು.

**ಫಾಸ್ಟ್ ನ್ಯೂಸ್**

## ಫೆ.9ರಂದು ಸೈಬರ್ ಲಾ ಮತ್ತು ಎನ್‌ಡಿಪಿಎಸ್ ಕಾಯ್ದೆ ಬಗ್ಗೆ ಕಾನೂನು ಅರಿವು ನೆರವು

» **ಚಿತ್ರದುರ್ಗ**

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ) ವತಿಯಿಂದ ಇದೇ ಫೆ.9ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ಸರ್ಕಾರಿ ಕಲಾ ಕಾಲೇಜಿನ (ಸ್ವಾಯತ್ತ) ಡಾ.ಬಿ.ಆರ್.ಅಂಬೇಡ್ಕರ್ ಜ್ಞಾನ ಸಭಾಂಗಣದಲ್ಲಿ "ಸೈಬರ್ ಲಾ ಮತ್ತು ಎನ್‌ಡಿಪಿಎಸ್ ಕಾಯ್ದೆ ಬಗ್ಗೆ ಕಾನೂನು ಅರಿವು ನೆರವು" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಉದ್ಘಾಟನೆ ನೆರವೇರಿಸುವರು. ಸರ್ಕಾರಿ ಕಲಾ ಕಾಲೇಜು ಪ್ರಾಂಶುಪಾಲ ಪ್ರೊ.ಬಿ.ಟಿ.ತಿಪ್ಪೇರುದ್ರಸ್ವಾಮಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್.ಗಂಗಾಧರ್, ಅರ್ಥಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರು ಹಾಗೂ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಡಾ.ವಿ.ಪ್ರಸಾದ್ ಭಾಗವಹಿಸುವರು. ಸೈಬಲ್ ಲಾ ಮತ್ತು ಅದಕ್ಕೆ ಸಂಬಂಧಿಸಿದ ಕಾನೂನುಗಳ ಕುರಿತು ಸೈಬಲ್ ಕ್ರೈಂ ಪೊಲೀಸ್ ಠಾಣೆ ಪೊಲೀಸ್ ಇನ್ಸ್‌ಪೆಕ್ಟರ್ ಎನ್.ವೆಂಕಟೇಶ್ ಉಪನ್ಯಾಸ ನೀಡುವರು. ಎನ್‌ಡಿಪಿಎಸ್ ಕಾಯ್ದೆ ಕುರಿತು ಚಿತ್ರದುರ್ಗ ವಲಯ ಕಚೇರಿ ಅಬಕಾರಿ ನಿರೀಕ್ಷಕ ಶೇಕ್ ಇಮ್ರಾನ್ ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

## 13 ಬಂದ್‌ಗೆ ಚಿನ್ನ, ಬೆಳ್ಳಿ ವರ್ತಕರ ಬೆಂಬಲ



» **ನಾಯಕನಹಟ್ಟಿ**

ಭದ್ರ ಮೇಲ್ದಂಡೆ ಯೋಜನೆ ನಮ್ಮ ಕೂಸು ಆಗಿದ್ದು, ನಮ್ಮ ಹೋಬಳಿ ಮಟ್ಟದ ಎಲ್ಲಾ ಕೆರೆಗಳಿಗೆ ನೀರು ಹರಿಸಿದರೆ ಮಾತ್ರ ರೈತರು ಅಭಿವೃದ್ಧಿಯಾಗುತ್ತಾರೆ ಎಂದು, ವಿಶ್ವಕರ್ಮ ಸಮಾಜದ ಲೋಕೇಶ್ ಹೇಳಿದರು. ಪಟ್ಟಣದ ವಾಲ್ಮೀಕಿ ಕಛೇರಿಯಲ್ಲಿ ಭದ್ರ ಮೇಲ್ದಂಡೆ ಯೋಜನೆ ಅನುಷ್ಠಾನಕ್ಕೆ ಆಗ್ರಹಿಸಿ ನೀರಾವರಿ ಹೋರಾಟ ಸಮಿತಿ ವತಿಯಿಂದ ಬಂದ್ ಕರೆಗೆ ಪೂರ್ವಭಾವಿ ಸಭೆ ನಡೆಯಿತು. ನಂತರ ಮಾತನಾಡಿದ ಅವರು ಹೋರಾಟ ಎಂಬುದು ಅರ್ಧಕ್ಕೆ ನಿಲ್ಲಿಸಬಾರದು. ನಂತರ ಇದೇ ತಿಂಗಳ 13ರ ರಂದು ಬಂದ್ ಕರೆಗೆ ಚಿನ್ನ, ಬೆಳ್ಳಿ ವರ್ತಕರಿಂದ ನಮ್ಮ ಬೆಂಬಲ ಸೂಚಿಸಿದ್ದೇವೆ ಎಂದರು.ಹಟ್ಟಿ ಮಲ್ಲಪ್ಪ ನಾಯಕ ಸಂಘದ ಅಧ್ಯಕ್ಷ ಎತ್ತಿನಹಟ್ಟಿ ಗೌಡರು(ಪಟೇಲ್ ಜಿ.ಎಂ.ತಿಪ್ಪೇಸ್ವಾಮಿ) ಮಾತನಾಡಿ ನೀರಿಲ್ಲದೆ ನಾವು ಜೀವನ ಮಾಡಲಿಕ್ಕೆ ಸಾಧ್ಯವಾಗುವುದಿಲ್ಲ ಪಕ್ಕದ ಜಗಳೂರು ತಾಲ್ಲೂಕಿನ ಕೆರೆಗಳಿಗೆ ನೀರು ಬಂದಿವೆ, ನಮ್ಮ ಕೆರೆಗಳಿಗೆ ನೀರು ಬಂದರೆ ಮಾತ್ರ ಅಂತರ್ಜಲ ಹೆಚ್ಚಾಗುತ್ತದೆ. ಸಿರಿಗೆರೆ ಸ್ವಾಮೀಜಿ ಮತ್ತು ಶಾಸಕರನ್ನು ಕರೆಸಿ ಹೋರಾಟ ಮಾಡಿದರೆ ಮಾತ್ರ ನಮ್ಮ ಕೆರೆಗಳಿಗೆ ನೀರು ಬರಲು ಸಾಧ್ಯ ಎಂದರು.ನೀರಾವರಿ ಹೋರಾಟ ಸಮಿತಿಯ ಅಧ್ಯಕ್ಷರಾದ ಜಿ.ಬಿ.ಮುದಿಯಪ್ಪ ಮಾತನಾಡಿ ನಮ್ಮ ಚಿತ್ರದುರ್ಗ ಜಿಲ್ಲೆ ಬಯಲುಸೀಮೆ ಪ್ರದೇಶವಾಗಿದ್ದು ಕೆರೆಗಳಿಗೆ ನೀರು ತಂದರೆ ಮಾತ್ರ ರೈತರಿಗೆ ಅನುಕೂಲವಾಗಿತ್ತದೆ. 6 ಜನ ಶಾಸಕರನ್ನು ಒಬ್ಬ ಮಂತ್ರಿಯ ವಿಶ್ವಾಸವನ್ನು ತೆಗೆದುಕೊಂಡು ಹೋಗಿ ವಿಧಾನಸೌಧದ ಮುಂಭಾಗದಲ್ಲಿ ಹೋರಾಟ ಮಾಡಿದರೆ ನಮ್ಮ ಕೂಗು ರಾಜ್ಯದ ಮುಖ್ಯಮಂತ್ರಿಗಳ ಗಮನಕ್ಕೆ ಹೋಗುತ್ತದೆ ಎಂದರು. ಹಲವು ದಶಕಗಳಿಂದ ಈ ಹೋರಾಟ ಮಾಡುತ್ತಾ ಬಂದಿರುತ್ತಾರೆ. ಅದರಂತೆ ರೈತರ ಹೋರಾಟ ಮತ್ತು ಯೋಜನೆಯ ಲಾಭಕ್ಕಾಗಿ ಕೇಂದ್ರ ಸರ್ಕಾರ ಭದ್ರ ಮೇಲ್ದಂಡೆ ಯೋಜನೆಗೆ 5300 ಕೋಟಿ ಮೀಸಲಿರಿಸಿತ್ತು ಬಜೆಟ್ ವೇಳೆ ಈ ಕೊಡುಗೆಯನ್ನು ನಿರ್ಮಲ ಸೀತಾರಾಮನ್ ಮಂಡಿಸಿದರು, ಚಿತ್ರದುರ್ಗ ಜಿಲ್ಲೆಯ ರೈತರು ಹರ್ಷ ವ್ಯಕ್ತಪಡಿಸಿದ್ದರು, ಆದರೆ ಕೇಂದ್ರ ಸರ್ಕಾರ 5300 ಕೋಟಿ ಹಣ ಬಿಡುಗಡೆ ಮಾಡಲಿಲ್ಲ ಅದು ಹುಸಿಯಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಜವಳಿ ಅಂಗಡಿ ಮಾಲೀಕರು, ವರ್ತಕರು, ಬಂಗಾರದ ಅಂಗಡಿ ಮಾಲೀಕರು, ಕರ್ನಾಟಕ ರಕ್ಷಣೆ ವೇದಿಕೆ,ಪ್ರವೀಣ್ ಶೆಟ್ಟಿ ಬಳಗ, ಉಪ್ಪಾರ ಸಮುದಾಯದವರು, ಬಂಜಾರ ಸಮುದಾಯದವರು,ಕಿರಾಣಿಅಂಗಡಿಗಳು,ಆಟೋ ಚಾಲಕರು, ಸವಿತಾ ಸಮುದಾಯದವರು, ಕರ್ನಾಟ ದಲಿತ ಸಂಘರ್ಷ ಸಮಿತಿ, ಕಂಪ್ಯೂಟರ್ ಸೇವಾ ಕೇಂದ್ರದ ಸಂಘದವರು, ರಾಷ್ಟ್ರೀಯ ಕಿಸಾನ್ ಸಂಘ ಹಲವು ಸಂಘಟನೆಗಳು ಬೆಂಬಲ ಸೂಚಿಸುತ್ತೇವೆ ಎಂದರು. ಈ ಸಂದರ್ಭದಲ್ಲಿ ಉಪಸ್ಥಿತರಾದ ಚಿತ್ರದುರ್ಗ ಜಿಲ್ಲೆ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ, ಪ್ರಭುಸ್ವಾಮಿ, ಪಟ್ಟಣ ಪಂಚಾಯಿತಿ ಸದಸ್ಯ ಸೈಯದ್ ಅನ್ವರ್, ಅಬಕಾರಿ ತಿಪ್ಪೇಸ್ವಾಮಿ, ಪೆದ್ದನಓಬಯ್ಯ, ಮಾಜಿ ಪ.ಪಂ. ಸದಸ್ಯರ ಮನ್ಸೂರ್, ಬಸಪ್ಪನಾಯಕ, ಚೌಡಪ್ಪ, ಮುತ್ತಯ್ಯ, ವಿಶ್ವನಾಥ, ಕಾಟಯ್ಯ, ಜೋಗಿಹಟ್ಟಿ ಮಂಜುನಾಥ ಭಾಗವಹಿಸಿದ್ದರು.

### ನಗರಸಭೆ ಸಿಬ್ಬಂದಿಗಳಿಗೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ

# ಸ್ವಚ್ಛ, ಸುಂದರ ಚಿತ್ರದುರ್ಗ ನಿರ್ಮಾಣಕ್ಕೆ ಪಣತೊಡಿ

» **ಚಿತ್ರದುರ್ಗ**

ಸ್ವಚ್ಛ ಹಾಗೂ ಸುಂದರ ಚಿತ್ರದುರ್ಗ ನಗರ ನಿರ್ಮಾಣ ಮಾಡುವ ನಿಟ್ಟಿನಲ್ಲಿ ನಗರಸಭೆ ಸಿಬ್ಬಂದಿ, ನೌಕರರು ತಮ್ಮ ಜವಾಬ್ದಾರಿ ಅರಿತು ಕಾರ್ಯನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.





ನಗರದ ತರಾಸು ರಂಗಮಂದಿರದಲ್ಲಿ ಚಿತ್ರದುರ್ಗ ನಗರಸಭೆ ವತಿಯಿಂದ ನಗರಸಭೆ ಸಿಬ್ಬಂದಿಗಳಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಪೌರಕಾರ್ಮಿಕರಿಂದ ಪೌರಾಯುಕ್ತರ ವರೆಗೂ ನಾವೆಲ್ಲರೂ ಒಂದೇ ಕುಟುಂಬದ ಸದಸ್ಯರು ಎಂದು ಭಾವಿಸಿ, ಕೆಲಸ ಮಾಡಿದಾಗ ಮಾತ್ರ ನಗರಕ್ಕೆ ಹಾಗೂ ನಾಗರಿಕರಿಗೆ ಉತ್ತಮ ಸೇವೆ ಸಲ್ಲಿಸಲು ಸಾಧ್ಯವಾಗಲಿದ್ದು, ಅಂತಹ ನಗರ ಸುಂದರ ನಗರವನ್ನಾಗಿ ಕಾಣಲು ಸಾಧ್ಯವಾಗಲಿದೆ. ನಗರದ ತೇರು ಎಳೆಯಲು ನಗರಸಭೆ ಸಿಬ್ಬಂದಿಗಳು, ನೌಕರರೆಲ್ಲರೂ ಸಾರಥಿಗಳಾಗಬೇಕು. ನಗರಸಭೆ ಸಿಬ್ಬಂದಿಗಳು, ನೌಕರರು ತಮ್ಮ ಜವಾಬ್ದಾರಿ ಅರಿತು ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದರು.

ಕಂದಾಯ ಇಲಾಖೆ ಹಾಗೂ ನಗರಸಭೆ, ನಗರ ಸ್ಥಳೀಯ ಸಂಸ್ಥೆಗಳಿಗೆ ಜನಸ್ಪಂದನಾ ಕಾರ್ಯಕ್ರಮಗಳಲ್ಲಿ ಸ್ವಚ್ಛತೆ, ಕುಡಿಯುವ ನೀರು, ಮನೆ ಸೇರಿದಂತೆ ಮೂಲಸೌಕರ್ಯಗಳಿಗೆ ಸಂಬಂಧಪಟ್ಟಂತೆ ಸಾರ್ವಜನಿಕರಿಂದ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸಲ್ಲಿಕೆಯಾಗುತ್ತಿವೆ. ಕ್ಷೇತ್ರಮಟ್ಟದಲ್ಲಿ ಕಾರ್ಯನಿರ್ವಹಿಸುವ ನೌಕರರು ಹಾಗೂ ಕಚೇರಿಯಲ್ಲಿ ಕಾರ್ಯನಿರ್ವಹಿಸುವ ನೌಕರರು ಸಮನ್ವಯತೆಯಿಂದ ತಾವುಗಳು ಕಾರ್ಯನಿರ್ವಹಿಸಿದಲ್ಲಿ ನಗರವನ್ನು ಸುಂದರ ಹಾಗೂ ಸ್ವಚ್ಛ ನಗರವನ್ನಾಗಿ ಮಾಡಲು ಸಾಧ್ಯವಾಗಲಿದೆ ಎಂದು ತಿಳಿಸಿದರು. ನಗರಸಭೆ ಮೂಲಭೂತ ಸೌಕರ್ಯಗಳನ್ನು ನಾಗರಿಕರಿಗೆ ಕೊಡುವ ಜವಾಬ್ದಾರಿ ಹೊತ್ತ ಸಂಸ್ಥೆಯಾಗಿದೆ. ಚಿತ್ರದುರ್ಗ ನಗರದ ಕವಾಡಿಗರಹಟ್ಟಿಯಲ್ಲಿ ಈಚೆಗೆ ಜರುಗಿದ ಅಹಿತಕರ ಪ್ರಕರಣದಿಂದಾಗಿ ರಾಜ್ಯದ ಎಲ್ಲ ನಗರಸ್ಥಳೀಯ ಸಂಸ್ಥೆಗಳು ಎಚ್ಚೆತ್ತು ಜನರಿಗೆ ಶುದ್ಧವಾದ ಕುಡಿಯುವ ನೀರು ಪೂರೈಕೆ, ಜಲಸಂಗ್ರಹಾರಗಳ ಸ್ವಚ್ಛತೆ ಸೇರಿದಂತೆ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆಗೆ ವ್ಯವಸ್ಥೆ ಕ್ರಮ ವಹಿಸಲಾಗಿದೆ, ಅಧಿಕಾರಿ, ಸಿಬ್ಬಂದಿಗಳು ಮುಂಜಾಗ್ರತಾ ಕ್ರಮ ವಹಿಸಿದಲ್ಲಿ, ಇಂತಹ ಅಹಿತಕರ ಘಟನೆಗಳು ನಡೆಯದಂತೆ ತಡೆಗಟ್ಟಬಹುದು ಎಂದು ತಿಳಿಸಿದ ಅವರು, ಮುಂದಿನ ದಿನಗಳಲ್ಲಿ ಸ್ವಚ್ಛ ನಗರಗಳ ಪಟ್ಟಿಯಲ್ಲಿ ಚಿತ್ರದುರ್ಗ ನಗರವೂ ಸ್ಥಾನ ಪಡೆಯುವಂತೆ ಪಣತೊಡಬೇಕು ಎಂದು ಸಲಹೆ ನೀಡಿದರು.ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್ ಮಾತನಾಡಿ, ನಗರಸಭೆ ಸಿಬ್ಬಂದಿ, ನೌಕರರಿಗೆ ಜ್ಞಾನ, ಕೌಶಲ್ಯ, ಕಾರ್ಯದಕ್ಷತೆ ಮತ್ತು ಮನೋಭಾವದಲ್ಲಿನ ಬದಲಾವಣೆ ಹಾಗೂ ಕೆಲಸವನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಉತ್ತೇಜಿಸುವ ಬಗ್ಗೆ ತರಬೇತಿ ಕಾರ್ಯಾಗಾರ ಹಮ್ಮಿಕೊಂಡಿರುವುದು ಉತ್ತಮ ನಡೆಯಾಗಿದ್ದು, ಇದು ಅತ್ಯಗತ್ಯವಾಗಿ ಬೇಕಾಗಿದೆ ಎಂದು ಹೇಳಿದರು.

ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ಮಾತನಾಡಿ,ನಗರಸಭೆಸಿಬ್ಬಂದಿಗಳುತಮಗೆ ವಹಿಸಿದಕೆಲಸವನ್ನುಶ್ರದ್ಧೆ,ಇಚ್ಛಾಶಕ್ತಿಯಿಂದ ಕಾರ್ಯನಿರ್ವಹಿಸಬೇಕು. ಸಿಬ್ಬಂದಿಗಳು ತಮಗೆ ವಹಿಸಿದ ಕೆಲಸವನ್ನು ಅತೀ ತುರ್ತಾಗಿ, ಕಾಳಜಿಯಿಂದ ನಿರ್ವಹಿಸಿದರೆ ಸಾರ್ವಜನಿಕರ ಮೆಚ್ಚುಗೆಗೂ ಪಾತ್ರರಾಗತ್ತಾರೆ. ನಗರದ ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಗಳನ್ನು ನಿಗಧಿತ ಸಮಯಕ್ಕೆ, ಸಮರ್ಪಕವಾಗಿ ಒದಗಿಸಬೇಕು ಎಂದು ತಿಳಿಸಿದರು.

### ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಸೂಚನೆ

# ಜಿಲ್ಲೆಯಲ್ಲಿ ಅನಧಿಕೃತ ಗಣಿಗಾರಿಕೆ ಮತ್ತು ಸಾಗಾಣಿಕೆ ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ವಹಿಸಿ

» **ಚಿತ್ರದುರ್ಗ**

ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಗಣಿಗಾರಿಕೆ ಹಾಗೂ ಸಾಗಾಣಿಕೆಯನ್ನು ತಡೆಗಟ್ಟಲು ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಲಾದ ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿ, ಜಿಲ್ಲಾ ಮರಳು ಸಮಿತಿ ಹಾಗೂ ಜಿಲ್ಲಾ ಕಲ್ಲು ಪುಡಿ ಮಾಡುವ ಘಟಕಗಳ ಲೈಸೆನ್ಸಿಂಗ್ ಮತ್ತು ನಿಯಂತ್ರಣ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಗಣಿಗಾರಿಕೆ ಹಾಗೂ ಸಾಗಾಣಿಕೆಯನ್ನು ತಡೆಗಟ್ಟಲು ಸರ್ಕಾರದಿಂದ ಪ್ರತ್ಯೋಜಿಸಲಾದ ಅಧಿಕಾರದಡಿಯಲ್ಲಿ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯ ಎಲ್ಲಾ ಸದಸ್ಯ ಇಲಾಖೆಯ ಅಧಿಕಾರಿಗಳು ತಂಡ ರಚಿಸಿಕೊಂಡು ಕಟ್ಟುನಿಟ್ಟಾಗಿ ಕ್ರಮವಹಿಸಬೇಕು. ಈ ಸಂಬಂಧ ಜಿಲ್ಲೆಯಲ್ಲಿನ ಖನಿಜ ಸಾಗಾಣಿಕೆ ಮಾರ್ಗಗಳಲ್ಲಿ ಬರುವ ಪ್ರಮುಖ ಜಂಕ್ಷನ್‌ಗಳಲ್ಲಿ ಹಾಗೂ ಅಂತರ್‌ರಾಜ್ಯ ಗಡಿಗಳಲ್ಲಿ ಸಂಯುಕ್ತ ಖನಿಜ ತನಿಖಾ ಠಾಣೆಗಳನ್ನು ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯ ಆಡಳಿತಾತ್ಮಕ ವೆಚ್ಚದಲ್ಲಿ ಸ್ಥಾಪಿಸಿ, ಹೋಂಗಾರ್ಡ್‌ಗಳನ್ನು ನೇಮಕ ಮಾಡಿಕೊಂಡು, ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ಅನಧಿಕೃತ ಗಣಿಗಾರಿಕೆ ಹಾಗೂ ಸಾಗಾಣಿಕೆಯನ್ನು ತಡೆಗಟ್ಟಲು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವಂತೆ ತಾಕೀತು ಮಾಡಿದರು.

ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪನಿರ್ದೇಶಕ ಮಹೇಶ್ ಮಾಹಿತಿ ನೀಡಿ, ಸರ್ಕಾರದಿಂದ ಜಿಲ್ಲೆಗೆ ವರ್ಷಕ್ಕೆ 740 ಕೋಟಿ ರೂ. ರಾಜಸ್ವ ಸಂಗ್ರಹಣೆ ಗುರಿ ನಿಗದಿಪಡಿಸಿದ್ದು, ಜನವರಿ ಅಂತ್ಯದವರೆಗೆ 592 ಕೋಟಿ ರೂ. ರಾಜಸ್ವ ಸಂಗ್ರಹಣೆಯ ಗುರಿ ಇದೆ. ಇದಕ್ಕೆ ಬದಲಾಗಿ ಜನವರಿ ಅಂತ್ಯದವರೆಗೆ ಮುಖ್ಯ ಖನಿಜ ಮತ್ತು ಉಪ ಖನಿಜ ಗಣಿ ಗುತ್ತಿಗೆಗಳಿಂದ 494.23 ಕೋಟಿ ರೂ. ರಾಜಸ್ವ ಸಂಗ್ರಹಣೆಯಾಗಿದೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪೊಲೀಸ್ ಅಧೀಕ್ಷಕರು ರವರು ಈ ಆರ್ಥಿಕ ವರ್ಷದ ಅಂತ್ಯಕ್ಕೆ ಶೇ. 100 ರ ಗುರಿ ಸಾಧಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗುವಂತೆ ಉಪನಿರ್ದೇಶಕರಿಗೆ ಸೂಚಿಸಿದರು.

ಜಿಲ್ಲಾ ವ್ಯಾಪ್ತಿಯಲ್ಲಿ ಖನಿಜ/ಉಪ ಖನಿಜ ಗಣಿ ಗುತ್ತಿಗೆಗಳ ಮಂಜೂರಾತಿಗೆ ಸಂಬಂಧಿಸಿದಂತೆ ಸಲ್ಲಿಕೆಯಾಗುವ ಅರ್ಜಿಗಳನ್ನು ತ್ವರಿತವಾಗಿ ವಿಲೆಗೊಳಿಸಿ ಆರ್ಥಿಕ ವರ್ಷದ ಅಂತ್ಯಕ್ಕೆ ಶೇ. 100 ರ ಗುರಿ ಸಾಧಿಸಲು ಸಂಬಂಧಪಟ್ಟ ಅರ್ಜಿಗಳನ್ನು ವಿಳಂಬ ಮಾಡದಂತೆ ನಿಯಮಾನುಸಾರ ಕ್ರಮವಹಿಸಲು ಟಾಸ್ಕ್ ಫೋರ್ಸ್ (ಗಣಿ) ಸಮಿತಿಯ ಎಲ್ಲಾ ಸದಸ್ಯ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವೆಂಕಟೇಶ್ ಅವರು ಸೂಚಿಸಿದರು.

ಕೆ.ಎಂ.ಎಂ.ಸಿ.ಆರ್-1994 ರ ನಿಯಮ 3-ಎಫ್ ರಡಿಯಲ್ಲಿ ಕುಲಕಸಬುದಾರರ ಜೀವನೋಪಾಯಕ್ಕೆ ಅನುವು ಮಾಡಿಕೊಡುವ ಸಂಬಂಧ ಈಗಾಗಲೇ 15 ಕಲ್ಲು ಬ್ಲಾಕ್‌ಗಳನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಗುರುತಿಸಿ ನಿರಾಕ್ಷೇಪಣಾ ಪತ್ರಗಳಿಗೆ ಕಂದಾಯ ಹಾಗೂ ಅರಣ್ಯ ಇಲಾಖೆಗಳಿಗೆ ನಕ್ಷೆಯೊಂದಿಗೆ ಪತ್ರ ಬರೆಯಲಾಗಿದ್ದು, ಹೊಳಲ್ಕೆರೆ ತಾಲ್ಲೂಕಿನ 03 ಬ್ಲಾಕ್‌ಗಳಿಗೆ ಮತ್ತು ಮೊಳಕಾಲ್ಮೂರು ತಾಲ್ಲೂಕಿನ 01 ಬ್ಲಾಕ್‌ಗೆ ನಿರಾಕ್ಷೇಪಣಾ ಪತ್ರಗಳು ಸ್ವೀಕೃತಿಯಾಗಿದ್ದು, ನಿಯಮಾನುಸಾರ ಅಧಿಸೂಚನೆ ಹೊರಡಿಸಿ ಅರ್ಜಿಗಳನ್ನು ಆಹ್ವಾನಿಸಿ ಅರ್ಹ ಅರ್ಜಿಗಳನ್ನು ಲಾಟರಿ ಮೂಲಕ ಬ್ಲಾಕ್‌ಗಳನ್ನು ಮಂಜೂರು ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ, ಉಪವಿಭಾಗಾಧಿಕಾರಿ ಕಾರ್ತಿಕ್, ಅರಣ್ಯ ಇಲಾಖೆ ಉಪ ಅರಣ್ಯ ಸಂರಕ್ಷಣಾಧಿಕಾರಿ ರಾಜಣ್ಣ, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಕಾಳೆಸಿಂಘೆ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಮಲ್ಲಿಕಾರ್ಜುನ್, ಪರಿಸರ ಅಧಿಕಾರಿ ಪ್ರಕಾಶ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಲೋಕಸಭೆ ಚುನಾವಣೆಗೆ ಸ್ಥಳೀಯರಿಗೆ ಟಿಕೆಟ್ ನೀಡಿ



» **ಚಿತ್ರದುರ್ಗ**

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಅಭ್ಯರ್ಥಿಯನ್ನಾಗಿ ಸ್ಥಳಿಯರನ್ನು ಆಯ್ಕೆ ಮಾಡಬೇಕು ಅದರಲ್ಲೂ ಜೆ.ಜೆ.ಹಟ್ಟಿತಿಪ್ಪೇಸ್ವಾಮಿಯವರನ್ನು ಕಾಂಗ್ರೆಸ್‌ಪಕ್ಷದಅಭ್ಯರ್ಥಿಯನ್ನಾಗಿ ಮಾಡುವಂತೆ ಕಾಂಗ್ರೆಸ್ ಪಕ್ಷದ ಮುಖಂಡರನ್ನು ಬಾಬು ಜಗಜೀವನರಾಂ ಕೈಗಾರಿಕಾ ನಿಗಮದ ಮಾಜಿ ಅಧ್ಯಕ್ಷರಾದ ಓ ಶಂಕರ್ ಒತ್ತಾಯಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದವ ಅವರು, ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಕಾಂಗ್ರೆಸ್ ಪಕ್ಷದಿಂದ 24 ಜನ ಅಭ್ಯರ್ಥಿಗಳು ಅರ್ಜಿ ಹಾಕಿದ್ದಾರೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 18 ಲಕ್ಷ ಮತದಾರರಿದ್ದಾರೆ ಅದರಲ್ಲಿ ಪರಿಶಿಷ್ಟ ಜಾತಿಯವರು 8 ಲಕ್ಷ ಮತದಾರರಿದ್ದು ಅದರಲ್ಲಿ 4 ಲಕ್ಷ ಮಾದಿಗ ಸಮುದಾಯದ ಮತದಾರ ಇದ್ದಾರೆ ಇದನ್ನು ಪಕ್ಷದ ವರಿಷ್ಠರು ಗಮನಿಸಿದ್ದಾರೆ ಸ್ಥಳೀಯರಿಗೆ ಟಿಕೆಟ್ ನೀಡಬೇಕೆಂದು ವರಿಷ್ಠರ ಗಮನಕ್ಕೆ ಬಂದಿದೆ.. ಕೆಲವರು ಮಿಸ್ ಗೈಡ್ ಮಾಡಿ ನನಗೆ ಟಿಕೆಟ್ ಸಿಕ್ಕಿದೆ ಅಂತ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ದೂರಿದರು.

ಬೇರೆ ಕಡೆಯಿಂದ ಬಂದು ಸ್ಪರ್ಧಿಸಿ ಗೆದ್ದು ಹೋಗುತ್ತಾರೆ ಯಾವುದೇ ಅಭಿವೃದ್ಧಿ ಮಾಡಿಲ್ಲ ಸ್ಥಳೀಯರಾದರೆ ಕ್ಷೇತ್ರದ ಅಭಿವೃದ್ಧಿಗೆ ಕೆಲಸ ಮಾಡುತ್ತಾರೆ. ಯಾವುದೇ ಕಾರಣಕ್ಕೂ ಹೊರಗಿನ ಜಿಲ್ಲೆಯವರೆಗೆ ಟಿಕೆಟ್ ನೀಡಬಾರದು ಸ್ಥಳೀಯರಿಗೆ ಟಿಕೆಟ್ ನೀಡಬೇಕೆಂದು ಆಗ್ರಹಿಸಿ ಸ್ಥಳೀಯ ಅಭ್ಯರ್ಥಿಯಾದ ಡಾ. ತಿಪ್ಪೇಸ್ವಾಮಿರವರಿಗೆ ಟಿಕೆಟ್ ನೀಡಿದರೆ 2 ಲಕ್ಷ ಮತಗಳಿಂದ ಗೆಲ್ಲಲಿದ್ದಾರೆ ಎಂದು ಭವಿಷ್ಯ ನುಡಿದರು.

ನಗರಸಭೆ ಮಾಜಿ ಅದ್ಯಕ್ಷರಾದ ಸಿ.ಟಿ.ಕೃಷ್ಣಮೂರ್ತಿ ಮಾತನಾಡಿ, ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷ ಆದರೂ ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಮಾಜಿ ವ'ುಖ್ಯವ'ಂತ್ರಿಗ'ಳಾದ' ಎಸ್.ನಿಜಲಿಂಗಪ್ಪ ಹಾಗೂ ಜಗಳೂರಿನ ಇಮಾಮ್‌ಸಾಬ್ ರವರನ್ನು ಹೊರತುಪಡಿಸಿದರೆ ಬೇರೆ ಯಾರಿಗೂ ಸಹ ಸ್ಥಳೀಯರಿಗೆ ಕಾಂಗ್ರೆಸ್ ಪಕ್ಷ ಟಿಕೆಟ್ ನೀಡಿರುವುದಿಲ್ಲ.

**ಪ್ರಮುಖ ಸುದ್ದಿ**

### ಜಿಲ್ಲಾಮಟ್ಟದ ಗುಲಾಬಿ ಆಂದೋಲನ ಜಾಗೃತಿ ಜಾಥಾ

# ತಂಬಾಕು ಉತ್ಪನ್ನ ಸೇವನೆ ವಿರುದ್ಧ ಗುಲಾಬಿ ಆಂದೋಲನ

» **ಚಿತ್ರದುರ್ಗ**

ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಜಿಲ್ಲೆಯಾದ್ಯಂತ ಎಲ್ಲಾ ಶಾಲಾ, ಕಾಲೇಜುಗಳಲ್ಲಿ, ಸಾರ್ವಜನಿಕರಿಗೆ, ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ ಮತ್ತು ತಂಬಾಕು ಮಾರಾಟಗಾರರಿಗೆ ಶೈಕ್ಷಣಿಕ ಸಂಸ್ಥೆಗಳ ಹತ್ತಿರ 100 ಯಾರ್ಡ್ಸ್ ಅಂತರದಲ್ಲಿ ತಂಬಾಕು ಮಾರಾಟ ಮಾಡದಂತೆ ವಿದ್ಯಾರ್ಥಿಗಳಿಂದ ಗುಲಾಬಿ ನೀಡುವ ಮೂಲಕ ಮನವೊಲಿಸುವ ನಿಟ್ಟಿನಲ್ಲಿ ಚಿತ್ರದುರ್ಗ ನಗರದ ವಾಸುದೇವರೆಡ್ಡಿ ಸ್ಮಾರಕ ಪ್ರೌಢಶಾಲೆಯಲ್ಲಿ ಬುಧವಾರ ಜಿಲ್ಲಾ ಮಟ್ಟದ ಗುಲಾಬಿ ಆಂದೋಲನ ಜಾಗೃತಿ ಜಾಥಾ ಕಾರ್ಯಕ್ರಮ ನಡೆಯಿತು.



ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರ್ ಅವರು ಜಿಲ್ಲಾ ಮಟ್ಟದ ಗುಲಾಬಿ ಆಂದೋಲನ ಜಾಗೃತಿ ಜಾಥಾಕ್ಕೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಹಾಗೆಯೇ ವಿದ್ಯಾರ್ಥಿಗಳಿಗೆ ಗುಲಾಬಿ ನೀಡಿ, ವಿದ್ಯಾರ್ಥಿಗಳು ಸಾರ್ವಜನಿಕರಿಗೆ ಮತ್ತು ತಂಬಾಕು ಮಾರಾಟಗಾರರಿಗೆ ಗುಲಾಬಿ ನೀಡುವ ಮೂಲಕ ತಂಬಾಕನ್ನು ತ್ಯಜಿಸುವಂತೆ ಮತ್ತು ವಿದ್ಯಾರ್ಥಿಗಳಿಗೆ ತಮ್ಮ-ತಮ್ಮ ಮನೆಗಳಲ್ಲಿ ಯಾರಾದರೂ ತಂಬಾಕು ಉತ್ಪನ್ನಗಳನ್ನು ಸೇವನೆ ಮಾಡುತ್ತಿದ್ದರೆ ಅವರನ್ನು ತಂಬಾಕು ತ್ಯಜಿಸುವಂತೆ ಜಾಗೃತಿ ಮೂಡಿಸಿ ಮನವೊಲಿಸಲು ತಿಳಿಸಿದರು.

ಸಾರ್ವಜನಿಕರು ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ ಮತ್ತು ತಂಬಾಕು ಮಾರಾಟಗಾರರಿಗೆ ಶೈಕ್ಷಣಿಕ ಸಂಸ್ಥೆಗಳ ಹತ್ತಿರ 100 ಯಾರ್ಡ್ಸ್ ಅಂತರದಲ್ಲಿ ತಂಬಾಕು ಮಾರಾಟ ಮಾಡದಂತೆ ಕರೆ ನೀಡಿದರು. ನಂತರ ಜಾಗೃತಿ ಜಾಥಾ ಕಾರ್ಯಕ್ರಮವು ಚಿತ್ರದುರ್ಗ ನಗರದ ಶ್ರೀ ವಾಸುದೇವರೆಡ್ಡಿ ಸ್ಮಾರಕ ಪ್ರೌಢಶಾಲೆಯ ಸುತ್ತ-ಮುತ್ತ ಇರುವಂತಹ ಸಾರ್ವಜನಿಕರಿಗೆ ಮತ್ತು ತಂಬಾಕು ಮಾರಾಟಗಾರರಿಗೆ ಜಾಗೃತಿ ಮೂಡಿಸಿ ಶಾಲೆಗೆ ಮರಳಲಾಯಿತು.

ಕಾರ್ಯಕ್ರಮದಲ್ಲಿ ವಾಸುದೇವರೆಡ್ಡಿ ಸ್ಮಾರಕ ಪ್ರೌಢಶಾಲೆ ಮುಖ್ಯ ಶಿಕ್ಷಕಿ ಬಿ.ಎ.ಪದ್ಮ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ್, ಸಮಾಜ ಕಾರ್ಯಕರ್ತ ಕೆ.ಎಂ.ತಿಪ್ಪೇಸ್ವಾಮಿ, ಶಾಲಾ ಶಿಕ್ಷಕ ವರ್ಗದವರು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T